# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ


**ಸುಭಾಷಿತ:**
ಮನಸ್ಸು ನಿನ್ನನ್ನು ನಿಯಂತ್ರಿಸುವ ಮೊದಲು
ಮನಸ್ಸನ್ನು ನೀನು ನಿಯಂತ್ರಣದಲ್ಲಿಟ್ಟುಕೊಳ್ಳು..
ಸೂರ್ಯ ಚಂದ್ರರಂತೆ ಜಗತ್ತಿಗೆ ನೀನು
ಬೆಳಕಾಗುವುದು ಬೇಡ. ನಿನ್ನ ಬದುಕಿಗೆ ನೀನು
ಬೆಳಕಾಗು ಸಾಕು.. ಆಗ ನಿನ್ನ ಬದುಕು ಧನ್ಯ..
ಒಂಟಿಯಾದೆ ಎಂದು ಕೊರಗಬೇಡ
ನೀನು ಬರುವಾಗಲು ಒಂಟಿ. ಹೋಗುವಾಗಲು
ಒಂಟಿ.. ನೀನು ಒಂಟಿಯಾದಾಗಲೇ ನಿನ್ನ
ಸಾಮರ್ಥ್ಯ ತೋರಿಸುವ ಸಮಯ ಬರುವುದು..
**ಭಗವಾನ್ ಶ್ರೀಕೃಷ್ಣ**




REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 25-07-2025 to 31-07-2025 ಬೆಲೆ: 7-00 ಸಂಪುಟ–5 ಸಂಚಿಕೆ–05 ಪುಟಗಳು–6












ಒಂದು ಕಾಲವಿತ್ತಂತೆ ಆಟಿ ತಿಂಗಳು ಬಂದರೆ ಜಿಣುಗುಟ್ಟುವ ಮಳೆ ಒಂದು ಕಡೆಯಾದರೆ, ಹೊಟ್ಟೆ ತುಂಬಾ ಊಟ ಮಾಡಲು ಸಿಗದೆಂತಹ ಸಮಯ. ಆದರೆ ಇಂದಿನ ಜನಮಾನಸದಲ್ಲಿ ಆಟಿ ತಿಂಗಳು ಬಂತೆಂದರೆ ತುಳುನಾಡಿನಲ್ಲಿ ವಿಶೇಷ ಆಚರಣೆಗಳು, ಊಟ ಉಪಚಾರಗಳು ಖುಷಿ ಕೊಡುವುದು. ಅಷ್ಟೇ ಅಲ್ಲದೆ ಆಟಿ ಅಮಾವಾಸ್ಯೆಯ ದಿನ "ಪಾಲೆ ಕೆತ್ತೆಯ ಕಷಾಯ" ಕುಡಿಯುವ ಪದ್ಧತಿ ಬಹಳ ಹಿಂದಿನಿಂದಲೇ ಬಂದಿದೆ. ಇದನ್ನು ಕುಡಿಯುವುದರಿಂದ ದೇಹದಲ್ಲಿ ರೋಗನಿರೋಧಕ ಶಕ್ತಿ ಹೆಚ್ಚುತ್ತದೆ. ವಿಶೇಷವೆಂದರೆ ಆಟಿ ಅಮಾವಾಸ್ಯೆಯ ದಿನ ಮಾತ್ರ ಈ ಮರದಲ್ಲಿ ಔಷಧೀಯ ಗುಣ ಮೈಗೂಡಿಕೊಂಡಿದ್ದು, ಬೇರೆ ದಿನ ಇದು ವಿಷವಾಗಿ ಪರಿಣಮಿಸುತ್ತದೆ ಎನ್ನುವುದು ವಾಸ್ತವ.

## ಸರ್ಕಾರದ ದಿವ್ಯ ನಿರ್ಲಕ್ಷ್ಯವೇ ನೇರ ಕಾರಣ –ಕ್ಯಾ. ಚೌಟ



**ನವದೆಹಲಿ:** ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೆಂಪು ಕಲ್ಲು ಹಾಗೂ ಮರಳು ಅಭಾವದಿಂದ ಕಟ್ಟಡ ನಿರ್ಮಾಣ ಕಾಮಗಾರಿ ಸ್ಥಗಿತಗೊಂಡಿದ್ದು, ಇದರಿಂದ ತೀವ್ರ ಸಂಕಷ್ಟ ಎದುರಿಸುತ್ತಿರುವ ಜನಸಾಮಾನ್ಯರು, ಕಾರ್ಮಿಕರು ಹಾಗೂ ಈ ಉದ್ಯಮವನ್ನು ನಂಬಿಕೊಂಡಿರುವ ಲಕ್ಷಾಂತರ ಕುಟುಂಬಗಳ ಹಿತ ಕಾಪಾಡುವುದಕ್ಕೆ ರಾಜ್ಯ ಸರ್ಕಾರ ಕೂಡಲೇ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಸಂಸದ ಕ್ಯಾ. ಬ್ರಿಜೇಶ್ ಚೌಟ ಒತ್ತಾಯಿಸಿದ್ದಾರೆ. ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದ ಜನವಿರೋಧಿ ಹಾಗೂ ಕಾರ್ಮಿಕ **3ನೇ ಪುಟಕ್ಕೆ**

## ಗೋವಾ ಸಿಎಂ ಮಾನಸಿಕ ಸ್ಥಿಮಿತ ಕಳೆದು ಕೊಂಡಿದ್ದಾರೆ –ಡಿಕೆಶಿ



**ಬೆಂಗಳೂರು:** ಮಹದಾಯಿ ಯೋಜನೆಗೆ ಕೇಂದ್ರ ಅರಣ್ಯ ಇಲಾಖೆ ಅನುಮತಿ ನೀಡುವುದಿಲ್ಲ ಎಂಬ ಗೋವಾ ಸಿಎಂ ಪ್ರಮೋದ್ ಸಾವಂತ್ ಅವರ ಹೇಳಿಕೆ ಖಂಡನೀಯ. "ಗೋವಾ ಸಿಎಂ ಮಾನಸಿಕ ಸ್ಥಿಮಿತ ಕಳೆದುಕೊಂಡು ಈ ರೀತಿ ಮಾತನಾಡಿದ್ದಾರೆ. ನಮ್ಮದು ಒಕ್ಕೂಟ ವ್ಯವಸ್ಥೆ ರಾಷ್ಟ್ರ. ಇಲ್ಲಿ ಅಂತರ ರಾಜ್ಯಗಳ ನಡುವಣ ಸಂಬಂಧ ಹೇಗಿರಬೇಕು ಎಂಬುದು ಅವರಿಗೆ ತಿಳಿದಿಲ್ಲ. ಇದು ನಮ್ಮ ನೆಲ, ನಮ್ಮ ಯೋಜನೆ ನಾವು ಮಾಡುತ್ತೇವೆ. ಇದನ್ನು ಪ್ರಶ್ನಿಸುವುದು ಅವರ ಹಕ್ಕಲ್ಲ. ಮಹದಾಯಿ ವಿಚಾರದಲ್ಲಿ ನ್ಯಾಯಾಧಿಕರಣದ ತೀರ್ಪು ಹೊರಬಿದ್ದಿದೆ. ಯೋಜನೆ ಜಾರಿಗೆ ಸಂಬಂಧಿಸಿದಂತೆ ಟೆಂಡರ್ ಕರೆಯಲಾಗಿದೆ. ಬಿಜೆಪಿ ಸರ್ಕಾರದ ಅವಧಿಯಲ್ಲಿ **3ನೇ ಪುಟಕ್ಕೆ**

## ಕಿವಿಗೆ ಹೂ ಮುಡಿಸಲು ಸಿಎಂ ನಾಟಕ –ಬಿವೈವಿ



**ಬೆಂಗಳೂರು:** ಹಿಂದುಳಿದ ಸಮುದಾಯಗಳ ಕಿವಿಗೆ ಹೂ ಮುಡಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹೊಸ ನಾಟಕ ಶುರುವಿಟ್ಟುಕೊಂಡಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಟೀಕಿಸಿದ್ದಾರೆ. ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಸತತ 10 ವರ್ಷಗಳ ಕಾಲ ಕಾಂತರಾಜು ಆಯೋಗದ ಜಾತಿ ಸಮೀಕ್ಷೆಯ ವರದಿಯನ್ನು ರಾಜಕೀಯ ದಾಳ ಮಾಡಿಕೊಂಡು, ಕರ್ನಾಟಕದ ಜನರ ತೆರಿಗೆಯ ¹165 ಕೋಟಿ ಹಣವನ್ನು ನಿರರ್ಥಕಗೊಳಿಸಿದ ಸಿದ್ದರಾಮಯ್ಯನವರು **3ನೇ ಪುಟಕ್ಕೆ**







# ಗೋವಾ ಸಿಎಂ ಮಾನಸಿಕ ಸ್ಥಿಮಿತ ಕಳೆದುಕೊಂಡಿದ್ದಾರೆ-ಡಿಕೆಶಿ

**ಒಂದನೇ ಪುಟದಿಂದ......**

ಬಸವರಾಜ ಬೊಮ್ಮಾಯಿ ಅವರು, ಸ್ಥಳೀಯ ಸಂಸದರು ಹಾಗೂ ಕೇಂದ್ರದ ಹಾಲಿ ಸಚಿವರಾದ ಪ್ರಹ್ಲಾದ್‌ಜೋಷಿ ಅವರು ಈ ಯೋಜನೆಜಾರಿಯಾಗಲಿದೆ ಎಂದು ಸಂಭ್ರಮಾಚರಣೆ ಮಾಡಿದ್ದರು. ಗೋವಾದವರಿಗೆ ಕರ್ನಾಟಕಕ್ಕೆ ನೋಟೀಸ್ ನೀಡಲು ಹಕ್ಕಿಲ್ಲ, ಏನೇ ನೋಟೀಸ್ ನೀಡಿದರೂ ನಾವು ಯೋಜನೆ ಕಾಮಗಾರಿ ಆರಂಭಿಸುತ್ತೇವೆ"ಎಂದು ಡಿಸಿಎಂ ಡಿ ಕೆ ಶಿವಕುಮಾರ್ ಅವರು ಗುಡುಗಿದ್ದಾರೆ. "ಈ ವಿಚಾರವಾಗಿ ರಾಜ್ಯದ ಎಲ್ಲಾ ಸಂಸದರನ್ನು ಭೇಟಿ ಮಾಡುತ್ತೇನೆ. ಇದು ನಮ್ಮ ರಾಜ್ಯದ ಸ್ವಾಭಿಮಾನದ ಪ್ರಶ್ನೆ. ಈ ವಿಚಾರದಲ್ಲಿ ನಮ್ಮ ಸಂಸದರು ಬಾಯಿ ಮುಚ್ಚಿಕೊಂಡಿರುವುದೇ ದೊಡ್ಡ ತಪ್ಪು. ನಮ್ಮರಾಜ್ಯದ 28 ಲೋಕಸಭೆ ಸದಸ್ಯರು, 12 ರಾಜ್ಯಸಭೆ ಸದಸ್ಯರು ಒಗ್ಗಟ್ಟಿನಿಂದ ಹೋರಾಡಿ ರಾಜ್ಯದ ಗೌರವ ಕಾಪಾಡಬೇಕಾಗಿದೆ. ಗೋವಾದ ಕೇವಲ ಒಂದು ಸಂಸದರಿಗಾಗಿ ನಮ್ಮ ಕರ್ನಾಟಕವನ್ನು ಮಾರಿಕೊಳ್ಳಲು ಸಾಧ್ಯವಿಲ್ಲ. ಈ ವಿಚಾರವಾಗಿ ಬಿಜೆಪಿ ಸಂಸದರು, ರಾಜ್ಯವನ್ನು ಪ್ರತಿನಿಧಿಸುತ್ತಿರುವ ಕೇಂದ್ರ ಸರಕಾರದ ಸಚಿವರು ಹಾಗೂ ಪ್ರಧಾನ ಮಂತ್ರಿಗಳ ಮೇಲೆ ಒತ್ತಡ ಹಾಕಬೇಕು. ನಾನು ಕೂಡಕೇಂದ್ರ ಜಲಶಕ್ತಿ ಸಚಿವರು ಹಾಗೂ ಪ್ರಧಾನಮಂತ್ರಿಗಳನ್ನು ಭೇಟಿ ಮಾಡಲು ಸಮಯಾವಕಾಶ ಕೇಳುತ್ತೇನೆ. ಎಲ್ಲಾ ಸಂಸದರ ನಿಯೋಗವನ್ನು ಕರೆದೊಯ್ಯುವ ಪ್ರಯತ್ನ ಮಾಡುತ್ತೇನೆ. ನಮ್ಮ ಜೊತೆ ಎಲ್ಲರೂ ಬರುವ ನಂಬಿಕೆ ಇದೆ. ಯಾರು ಬರುತ್ತಾರೋ ಬಿಡುತ್ತಾರೋ ನಮ್ಮ ಕೆಲಸ ನಾವು ಮಾಡುತ್ತೇವೆ" ಎಂದು ತಿಳಿಸಿದರು.

# ಸರ್ಕಾರದ ದಿವ್ಯ ನಿರ್ಲಕ್ಷ್ಯವೇ ನೇರ ಕಾರಣ-ಕ್ಯಾ. ಚೌಟ

**ಒಂದನೇ ಪುಟದಿಂದ......**

ವಿರೋಧಿ ಕ್ರಮಗಳಿಂದಾಗಿ ದಕ್ಷಿಣಕನ್ನಡದಲ್ಲಿ ಈಗ ಕಟ್ಟಡ ಕಾಮಗಾರಿಗಳಿಗೆ ಕೆಂಪುಕಲ್ಲು-ಮರಳು ಸಿಗದಂತೆ ಆಗಿದೆ. ಜಿಲ್ಲೆಯಲ್ಲಿ ಈಗಾಗಲೇ ನಿರ್ಮಾಣ ಕೆಲಸಗಳು ಬಹುತೇಕ ಸ್ಥಗಿತಗೊಂಡು ಅದನ್ನು ನೇರ ಹಾಗೂ ಪರೋಕ್ಷವಾಗಿ ನಂಬಿಕೊಂಡಿರುವ ಕಾರ್ಮಿಕರು, ವ್ಯಾಪಾರಸ್ಥರು, ಸರಕು ಸಾಗಾಣೆದಾರರು, ಉದ್ಯಮದವರು ತೀವ್ರ ಸಮಸ್ಯೆಗಳನ್ನು ಎದುರಿಸುತ್ತಿರುವುದಕ್ಕೆ ಈ ಕಾಂಗ್ರೆಸ್ ಸರ್ಕಾರವೇ ನೇರ ಹೊಣೆ. ಕೆಂಪುಕಲ್ಲು-ಮರಳು ಸಮಸ್ಯೆ ದಿನದಿಂದ ದಿನಕ್ಕೆ ಗಂಭೀರ ಸ್ವರೂಪ ಪಡೆದುಕೊಳ್ಳುತ್ತಿದ್ದರೂ ಇಲ್ಲಿವರೆಗೆ ,ಜಿಲ್ಲೆಯ ಉಸ್ತುವಾರಿ ಸಚಿವರಾಗಲಿ, ಗಣಿ ಸಚಿವರಾಗಲಿ ಅಥವಾ ಸಂಬಂಧಪಟ್ಟ ಇಲಾಖೆಯವರಾಗಲಿ ತತ್‌ಕ್ಷಣಕ್ಕೆ ಸ್ಪಂದಿಸುವ ಯಾವುದೇ ಕ್ರಮಕೈಗೊಂಡಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕರಾವಳಿಗೆ ಪ್ರತ್ಯೇಕ ಮರಳು ನೀತಿರೂಪಿಸುವುದಾಗಿ ಕಾಂಗ್ರೆಸ್ ತನ್ನ ಪ್ರಣಾಳಿಕೆಯಲ್ಲಿ ಹೇಳಿದ್ದು, ಎರಡು ವರ್ಷ ಕಳೆದರೂ ಕೆಂಪುಗಲ್ಲು ಹಾಗೂ ಮರಳು ಸಮಸ್ಯೆಗಳಿಗೆ ಶಾಶ್ವತ ಪರಿಹಾರದ ಯಾವುದೇ ಕ್ರಮಕೈಗೊಂಡಿಲ್ಲ ಎಂದು ಕ್ಯಾ.ಚೌಟ ಆಗ್ರಹಿಸಿದ್ದಾರೆ.

# ಕಿವಿಗೆ ಹೂ ಮುಡಿಸಲು ಸಿಎಂ ನಾಟಕ-ಬಿ ವೈ ವಿ

**ಒಂದನೇ ಪುಟದಿಂದ......**

ಕೇವಲ 15 ದಿನಗಳಲ್ಲಿ ರಾಜ್ಯದ 7 ಕೋಟಿ ಜನರ ಜಾತಿ ಸಮೀಕ್ಷಾ ಕಾರ್ಯ ಪೂರೈಸುವುದಕ್ಕೆ ನಿರ್ದೇಶನ ನೀಡಿ, ಮ್ಯಾಜಿಕ್ ಮಾಡಲು ಹೊರಟಿದ್ದಾರೆ ಎಂದು ವಾಗ್ದಾಳಿ ನಡೆಸಿದ್ದಾರೆ. ನಿಗದಿತ ಅವಧಿ ಮೀರಿದರೂ ಪರಿಶಿಷ್ಟ ಜಾತಿಯ ಒಳಮೀಸಲಾತಿ ಹಂಚಿಕೆಯ ಕು ರಿತು ಪರಿಶಿಷ್ಟ ಸಮುದಾಯಗಳ ಜಾತಿ ಗಣತಿ ಯ ಪ್ರಕ್ರಿಯೆ ಇನ್ನೂ ಪೂರ್ಣಗೊಂಡಿಲ್ಲ. ಇನ್ನು 7 ಕೋಟಿ ಜನರ ಜಾತಿಗಣತಿಯನ್ನು ಕೇವಲ 15 ದಿನಗಳಲ್ಲಿ (ಸೆಪ್ಟೆಂಬರ್ 22 ರಿಂದ ಅಕ್ಟೋಬರ್ 7ರವರೆಗೆ) ಪೂರ್ಣಗೊಳಿಸಲುಸಾಧ್ಯವೇ? ಸಾಧ್ಯವಾಗಿಸುವುದಾದರೆ 'ಹಳೆ ಮದ್ಯ ಹೊಸ ಬಾಟಲಿ' ಎಂಬ 'ಕೈ'ಚಳಕ ತೋರಬಹುದಷ್ಟೇ? ಎಂದು ವಿಜಯೇಂದ್ರ ವ್ಯಂಗ್ಯವಾಡಿದ್ದಾರೆ. ಕರ್ನಾಟಕದ ಜನರನ್ನು ಮೂರ್ಖರನ್ನಾಗಿಸಿ ತಮ್ಮರಾಜಕೀಯ ಸ್ವಾರ್ಥಕ್ಕಾಗಿ, ಮುಖ್ಯಮಂತ್ರಿ ವಿರುದ್ಧ ಟೀಕಾ ಪ್ರಹಾರ ನಡೆಸಿದ್ದಾರೆ.

# ವಿಕಲಚೇತನ ವಿದ್ಯಾರ್ಥಿಗಳಿಗೆ ಸ್ಕಾಲರ್‌ಶಿಪ್‌ಗೆ ಅರ್ಜಿ ಆಹ್ವಾನ

ಮಂಗಳೂರು - 2025ನೇ ಪ್ರಸಕ್ತ ಸಾಲಿನಲ್ಲಿ ವಿಕಲಚೇತನರ ಹಾಗೂ ಹಿರಿಯನಾಗರಿಕರ ಸಬಲೀಕರಣ ಇಲಾಖೆಯಲ್ಲಿ ಕೇಂದ್ರ ಸರಕಾರದ ವತಿಯಿಂದ ನ್ಯಾಷನಲ್ ಇ-ಸ್ಕಾಲರ್‌ಶಿಪ್ ಯೋಜನೆಯಡಿ, ಪ್ರಿ ಮೆಟ್ರಿಕ್ ಟಾಪ್, ಟಾಪ್ ಕ್ಲಾಸ್, ಪೋಸ್ಟ್ ಮೆಟ್ರಿಕ್ ವಿಕಲಚೇತನ ವಿದ್ಯಾರ್ಥಿಗಳಿಗೆ ಸ್ಕಾಲರ್‌ಶಿಪ್‌ಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ 9110897458, 9164645616, 9686682251, 815300057, 7975199473, 0824-2455999ದೂ.ಸಂ.ಗೆ ಅಥವಾ ಇಲಾಖೆಯ ವೆಬ್‌ಸೈಟ್ www.disabilityaff airs.gov.inನಲ್ಲಿ ಭೇಟಿ ನೀಡಬಹುದೆಂದು ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳ ಪ್ರಕಟಣೆ ತಿಳಿಸಿದೆ.

# ಮಂಗಳೂರು ವಿ.ವಿಯ ವಿವಿಧ ಕೋರ್ಸ್‌ಗೆ ಅರ್ಜಿ ಆಹ್ವಾನ

ಮಂಗಳೂರು-ಶೈಕ್ಷಣಿಕ ವರ್ಷ 2025-26ನೇ ಸಾಲಿಗೆ ಮಂಗಳೂರು ವಿಶ್ವವಿದ್ಯಾನಿಲಯದ ಆವರಣ, ಮಂಗಳಗಂಗೋತ್ರಿ ಮತ್ತು ವಿಶ್ವವಿದ್ಯಾನಿಲಯ ಕಾಲೇಜು ಮಂಗಳೂರು/ ಮಂಗಳೂರು ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳು (ಸರಕಾರಿ ಕೋಟಾದ ಸೀಟುಗಳು) ಮತ್ತು ಸರಕಾರಿ ಕಾಲೇಜುಗಳಲ್ಲಿ ನಡೆಸಲಾಗುವ ಸ್ನಾತಕೋತ್ತರ/ ಬಿ.ಪಿ.ಎಡ್/ ಡಿಪ್ಲೋಮಾ/ ಸರ್ಟಿಫಿಕೇಟ್ ಕಾರ್ಯಕ್ರಮಗಳ ಪ್ರವೇಶಾತಿಗೆ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ವಿದ್ಯಾರ್ಥಿಗಳು ಹೆಚ್ಚಿನ ಮಾಹಿತಿಗೆ ಮಂಗಳೂರು ವಿಶ್ವವಿದ್ಯಾನಿಲಯದ ವೆಬ್‌ಸೈಟ್ www.mangaloreuniversity.ac.in ನಿಂದ ಪಡೆದುಕೊಳ್ಳಬಹುದು ಎಂದು ಕುಲ ಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಧಾನಮಂತ್ರಿ ಮತ್ಸ್ಯ ಸಂಪದ ಯೋಜನೆಗೆ ಅರ್ಜಿ ಆಹ್ವಾನ

ಶಿವಮೊಗ್ಗ : ಮೀನುಗಾರಿಕಾ ಇಲಾಖೆಯಿಂದ 2022-23ರಿಂದ 2024-25ನೇ ಸಾಲಿನವರೆಗೆ ಮರು ಹಂಚಿಕೆಯಾಗಿರುವ ಪ್ರಧಾನಮಂತ್ರಿ ಮತ್ಸ್ಯ ಸಂಪದ ಮತ್ತು ನೀಲಿಕ್ರಾಂತಿ ಯೋಜನೆಯಡಿ ವಿವಿಧ ಘಟಕಗಳಿಗೆ ಸಹಾಯಧನ ನೀಡಲು ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ಆಗಸ್ಟ್ 20ರೊಳಗೆ ಆಯಾ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಯಿಂದ ಅರ್ಜಿಯನ್ನು ಪಡೆದು ಸಂಬಂಧಪಟ್ಟ ತಾಲ್ಲೂಕಿನ ಮೀನುಗಾರಿಕೆ ಸಹಾಯ ನಿರ್ದೇಶಕರ ಕಚೇರಿಗೆ ಪೂರ್ಣ ದಾಖಲೆಗ ಳೊಂದಿಗೆ ಸಲ್ಲಿಸಬೇಕು ಎಂದು ಮೀನುಗಾರಿಕೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೃಶ್ಯಕಲೆಯಲ್ಲಿ ಬಿ.ವಿ.ಎ. ಪದವಿ ಪ್ರವೇಶಕ್ಕೆ ಅರ್ಜಿ ಆಹ್ವಾನ

ಶಿವಮೊಗ್ಗ : ಪ್ರಸಕ್ತ ಶೈಕ್ಷಣಿಕ ಸಾಲಿಗೆ ಮೈಸೂರು ವಿಶ್ವವಿದ್ಯಾನಿಲಯಕ್ಕೆ ಸಂಯೋಜನೆಗೊಂಡಿರುವ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು (ಕಾವಾ), ಸಿದ್ಧಾರ್ಥನಗರ, ಮೈಸೂರು ಸಂಸ್ಥೆಯಲ್ಲಿ ಬ್ಯಾಚುಲರ್ ಆಫ್ ವಿಜ್ಯುಯಲ್ ಆರ್ಟ್ಸ್ (ಬಿ.ವಿ.ಎ) 4 ವರ್ಷದ ಎಂಟು ಸೆಮಿಸ್ಟರ್ ಎನ್.ಇ.ಪಿ.ಪದ್ಧತಿಯ ದೃಶ್ಯಕಲೆಯಲ್ಲಿ ಪ್ರಥಮ ಬಿ.ವಿ.ಎ. ಪದವಿ ಪ್ರವೇಶಾತಿಗಾಗಿ ದ್ವಿತೀಯ ಪಿಯುಸಿ ಪರೀಕ್ಷೆ-2 ಮತ್ತು 3 ರಲ್ಲಿ ಉತ್ತೀರ್ಣರಾದ ಹಾಗೂ ದ್ವಿತೀಯ ಪಿಯುಸಿಗೆ ಸಮಾನಾಂತರ ಕೋರ್ಸ್ ಮಾಡಿದ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ. ಹೆಚ್ಚಿನ ಮಾಹಿತಿಗಾಗಿ ಕಾಲೇಜಿನ ವೆಬ್‌ಸೈಟ್ ಹಾಗೂ ಸಹಾಯವಾಣಿ ಸಂ.: 0821-2438931ನ್ನು ಸಂಪರ್ಕಿಸುವುದು.

# ಕೃಷಿ ಯಂತ್ರೋಪಕರಣಗಳಿಗೆ ಅರ್ಜಿ ಆಹ್ವಾನ

ಮಡಿಕೇರಿ : ಪ್ರಸಕ್ತ (2025-26) ಸಾಲಿನಲ್ಲಿ ಕೃಷಿ ಯಾಂತ್ರೀಕರಣ ಮತ್ತು ಕೃಷಿ ಉತ್ಪನ್ನಗಳ ಸಂಸ್ಕರಣೆ ಕಾರ್ಯಕ್ರಮದಲ್ಲಿ ಸಾಮಾನ್ಯ ವರ್ಗದ ರೈತರಿಗೆ ಶೇ.50ರ ರಿಯಾಯಿತಿಯಲ್ಲಿ ಕೃಷಿ ಯಂತ್ರೋಪಕರಣಗಳು ಲಭ್ಯವಿರುತ್ತದೆ. ಆಸಕ್ತ ರೈತರು ತಮ್ಮ ವ್ಯಾಪ್ತಿಯ ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ನೀಡಿ ಉಚಿತವಾಗಿ ಅರ್ಜಿಯನ್ನು ರೈತ ಸಂಪರ್ಕ ಕೇಂದ್ರದಿಂದ ಪಡೆದು ತಮ್ಮ ಅರ್ಜಿಯೊಂದಿಗೆ ಪಹಣಿ (ಆರ್‌ಟಿಸಿ), ಆಧಾರ್ ಕಾರ್ಡ್‌ನ ಜೆರಾಕ್ಸ್, ಬ್ಯಾಂಕ್ ಪಾಸ್ ಪುಸ್ತಕದ ಜೆರಾಕ್ಸ್, ಒಂದು ಭಾವಚಿತ್ರ, ರೂ. 100 ಛಾಪಾಕಾಗದ ದಾಖಲಾತಿಗಳನ್ನು ಸಲ್ಲಿಸಿ ಇಲಾಖೆಯಲ್ಲಿ ಸಿಗುವ ಕೃಷಿ ಯಂತ್ರೋಪಕರಣಗಳ ಸದುಪಯೋಗ ಪಡೆದುಕೊಳ್ಳಬಹುದು.

# ಅತಿಥಿ ಶಿಕ್ಷಕರ ಹುದ್ದೆಗೆ ಅರ್ಜಿ ಆಹ್ವಾನ

ಮಡಿಕೇರಿ : ಪ್ರಸಕ್ತ(2025-26) ಶೈಕ್ಷಣಿಕ ವರ್ಷದಿಂದ ನೂತನವಾಗಿ ಪ್ರಾರಂಭವಾಗುವ 60 ಸಂಖ್ಯಾ ಬಲದ ಮೌಲಾನಾ ಆಜಾದ್ ಮಾದರಿ ಶಾಲೆ ಮಡಿಕೇರಿ, ಮಡಿಕೇರಿ ತಾಲ್ಲೂಕು ಕೊಡಗು ಜಿಲ್ಲೆ, ಇಲ್ಲಿನ ಶಾಲಾ ವಿಭಾಗಕ್ಕೆ ಅತಿಥಿ ಶಿಕ್ಷಕರ ಸೇವೆಗಳನ್ನು ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಜಿಲ್ಲಾ ಕಚೇರಿ, ಅಲ್ಪಸಂಖ್ಯಾತರ ಕಲ್ಯಾಣ ಮೌಲಾನಾ ಆಜಾದ್ ಭವನ, ಎಫ್.ಎಂ.ಸಿ ಕಾಲೇಜು ಹತ್ತಿರ, ಮಡಿಕೇರಿ, ಕಚೇರಿ ದೂರವಾಣಿ ಸಂಖ್ಯೆ 08272-225528, 9686138688, 9972799091ನ್ನು ಸಂಪರ್ಕಿಸಬಹುದು.

# ಎಸ್‌ಐಟಿ ರಚನೆ : ಶ್ರೀಕ್ಷೇತ್ರ ಧರ್ಮಸ್ಥಳದ ವಕ್ತಾರರಿಂದ ಸ್ವಾಗತ

Special Investigation Team

ಮಂಗಳೂರು: ಧರ್ಮಸ್ಥಳದಲ್ಲಿ ನಡೆದಿದೆ ಎನ್ನಲಾದ 'ಶವ ಹೂಳಿದ' ಪ್ರಕರಣದ ತನಿಖೆಗಾಗಿ ಸರ್ಕಾರವು ಎಸ್‌ಐಟಿ ರಚಿಸಿರುವುದನ್ನು ವಿವಿಧ ಸಂಘಟನೆಗಳು ಹಾಗೂ ಶ್ರೀಕ್ಷೇತ್ರ ಧರ್ಮಸ್ಥಳದ ವಕ್ತಾರರೂ ಸ್ವಾಗತಿಸಿದ್ದಾರೆ. 'ಧರ್ಮಸ್ಥಳ ಠಾಣೆಯಲ್ಲಿ ದಾಖಲಾಗಿರುವ ದೂರು ರಾಷ್ಟ್ರ ಮಟ್ಟದಲ್ಲಿ ವಾದ- ಪ್ರತಿವಾದಕ್ಕೆ ಕಾರಣವಾಗಿತ್ತು. ಪ್ರಕರಣದ ಪ್ರಾಮಾಣಿಕ ತನಿಖೆ ಆಗಬೇಕೆಂಬುದು ಎಲ್ಲರ ಬಯಕೆಯಾಗಿತ್ತು. ಆದ್ದರಿಂದ ಎಸ್‌ಐಟಿಗೆ ವಹಿಸಿರುವುದು ಉತ್ತಮ ನಿರ್ಧಾರ' ಎಂದು ಶ್ರೀ ಕ್ಷೇತ್ರ ಧರ್ಮಸ್ಥಳದ ವಕ್ತಾರ ಕೆ. ಪಾರ್ಶ್ವನಾಥ್ ಜೈನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. 'ಧರ್ಮಸ್ಥಳದಲ್ಲಿ ಹಲವು ವರ್ಷಗಳ ಕಾಲ ಉದ್ಯೋಗಿಯಾಗಿದ್ದೆ' ಎಂದು ಹೇಳಿಕೊಂಡ ವ್ಯಕ್ತಿಯೊಬ್ಬರು, 'ಧರ್ಮಸ್ಥಳ ಗ್ರಾಮದಲ್ಲಿ ಮಹಿಳೆಯರು, ಯುವತಿಯರು ಸೇರಿ ಅನೇಕ ಕೊಲೆಗಳು ನಡೆದಿದ್ದು, ಹತ್ಯೆಯಾದವರ ಪೈಕಿ ಹಲವರ ಮೃತ ದೇಹವನ್ನು ನಾನೇ ಹೂತುಹಾಕಿದ್ದೇನೆ' ಎಂದು ಧರ್ಮಸ್ಥಳ ಪೊಲೀಸ್ ಠಾಣೆಗೆ ದೂರು ನೀಡಿ ನಂತರ ಇಬ್ಬರು ವಕೀಲರ ಜೊತೆ ಬೆಳ್ತಂಗಡಿ ನ್ಯಾಯಾಲಯಕ್ಕೆ ತೆರಳಿ ಹೇಳಿಕೆ ದಾಖಲಿಸಿದ್ದರು. ಇದಾದ ಬಳಿಕ ಘಟನೆ ಬಗ್ಗೆ ತನಿಖೆಯಾಗಬೇಕು ಎಂದು ಹಲವು ಸಂಘಟನೆಗಳು, ಹೋರಾಟಗಾರರು ಪೊಲೀಸರ ಮೇಲೆ ಒತ್ತಡ ಹೇರಿದ್ದರು.

# ಶಾಸಕ ಗುರ್ಮೆ ಸುರೇಶ್ ಶೆಟ್ಟಿ ನೆರೆ ಹಾವಳಿ ಪ್ರದೇಶಕ್ಕೆ ಭೇಟಿ



ಪಡುಬಿದ್ರಿ : ಕೆಲ ದಿನಗಳಿಂದ ಸುರಿಯುತ್ತಿರುವ ಭಾರಿ ಮಳೆಯಿಂದಾಗಿ ನೆರೆ ಉಂಟಾಗಿರುವ ಪುರಸಭೆ ವ್ಯಾಪ್ತಿ ಪ್ರದೇಶಕ್ಕೆ ಶಾಸಕ ಗುರ್ಮೆ ಸುರೇಶ್ ಶೆಟ್ಟಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಪುರಸಭೆ ವ್ಯಾಪ್ತಿಯ ಲೈಟ್‌ಹೌಸ್ ವಾರ್ಡ್‌ನ ರಾಮನಗರದಲ್ಲಿ ಮನೆಗಳಿಗೆ ನೀರು ನುಗ್ಗಿ ರಸ್ತೆಗಳು ಜಲಾವೃತಗೊಂಡಿದ್ದು, ಬೀಡುಬದಿ ವಾರ್ಡ್‌ನ ಕೆಲವೆಡೆ ಚರಂಡಿಯ ನೀರು ಗದ್ದೆಗಳಿಗೆ ನುಗ್ಗಿ ಬೆಳೆ ಹಾನಿಯಾಗಿದೆ. ನೀರು ಸರಾಗವಾಗಿ ಹರಿದು ಹೋಗಲು ಚರಂಡಿಗಳನ್ನು ನಿರ್ಮಿಸುಂತೆ, ಬೆಳೆ ಹಾನಿಗೆ ಗರಿಷ್ಠ ಪರಿಹಾರ ನೀಡುವಂತೆ ಅಧಿಕಾರಿಗಳಿಗೆ ಶಾಸಕರು ಸೂಚಿಸಿದರು. ಪುರಸಭೆ ಅಧ್ಯಕ್ಷೆ ಹರಿಣಾಕ್ಷಿ ದೇವಾಡಿಗ, ಸ್ಥಾಯಿ ಸಮಿತಿ ಅಧ್ಯಕ್ಷ ಅನಿಲ್ ಕುಮಾರ್, ಸದಸ್ಯರಾದ ನಿತೀಶ್ ಕುಮಾರ್, ಮುಖ್ಯಾಧಿಕಾರಿ ನಾಗರಾಜ್, ತಹಶೀಲ್ದಾರ್ ಪ್ರತಿಭಾ ಆರ್, ಸ್ಥಳೀಯರು ಜೊತೆಗಿದ್ದರು.

# ಮಣಿಪಾಲದಲ್ಲಿ ಸಮರ್ಪಕ ಯುಜಿಡಿ ವ್ಯವಸ್ಥೆಗೆ ಮನವಿ



ಉಡುಪಿ: ಮಣಿಪಾಲ ಪ್ರದೇಶದಲ್ಲಿ ಒಳಚರಂಡಿ (ಯುಜಿಡಿ) ವ್ಯವಸ್ಥೆ ಇಲ್ಲದೆ ಅಪಾರ್ಟ್‌ಮೆಂಟ್‌ಗಳ ತ್ಯಾಜ್ಯ ನೀರನ್ನು ತ್ಯಾಜ್ಯ ನೀರಿನ ಹೊಂಡದಲ್ಲಿ ಸಂಗ್ರಹಿಸಲಾಗುತ್ತದೆ. ಆದರೆ, ಲ್ಯಾಟರೆಟ್ ಶಿಲೆಯ ಪ್ರದೇಶವಾಗಿರುವುದರಿಂದ ನೀರು ಇಂಗುವುದಿಲ್ಲ. ಈ ಕಾರಣಕ್ಕೆ ಅನಿವಾರ್ಯವಾಗಿ ಕೊಳಚೆ ನೀರನ್ನು ಚರಂಡಿಗೆ ಬಿಡಬೇಕಾದ ಅನಿವಾರ್ಯತೆ ಎದುರಾಗಿದೆ ಎಂದು ಮಣಿಪಾಲದ ಅಪಾರ್ಟ್‌ಮೆಂಟ್ ನಿವಾಸಿಗಳು ಅಳಲು ತೋಡಿಕೊಂಡರು. ಕೊಳಚೆ ನೀರು ನಿರ್ವಹಣೆ ಕುರಿತು ಉಡುಪಿ ನಗರಸಭೆಯ ಸತ್ಯಮೂರ್ತಿ ಸಭಾಂಗಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಸಭೆಯಲ್ಲಿ ಮಾತನಾಡಿದ ಅವರು, ದೊಡ್ಡ ಬಿಲ್ಡರ್‌ಗಳಿಗೆ ನಗರಸಭೆಯು ವಸತಿ ಸಮುಚ್ಚಯ ನಿರ್ಮಿಸಲು ಪರವಾನಗಿ ನೀಡುತ್ತದೆ. ಅವರು ತ್ಯಾಜ್ಯ ನೀರು ನಿರ್ವಹಣೆಗೆ ಸಮರ್ಪಕ ವ್ಯವಸ್ಥೆ ಮಾಡದ ಕಾರಣ ವಸತಿ ಸಮುಚ್ಚಯ ನಿವಾಸಿಗಳು ಸಂಕಷ್ಟ ಅನುಭವಿಸಬೇಕಾಗಿದೆ ಎಂದರು. 'ನಗರಸಭೆಯವರು ವಸತಿ ಸಮುಚ್ಚಯ ನಿವಾಸಿಗಳಿಗೆ ನೋಟಿಸ್ ಕೊಟ್ಟು ಹೆದರಿಸುವುದಲ್ಲ, ಬಿಲ್ಡರ್‌ಗಳನ್ನು ಹಿಡಿಯಿರಿ, 40ಲಕ್ಷ, 50 ಲಕ್ಷಕ್ಕೆ ಫ್ಲ್ಯಾಟ್ ಖರೀದಿಸಿದವರು ತಿಂಗಳಿಗೆ 3 ಸಾವಿರ ನಿರ್ವಹಣಾ ವೆಚ್ಚ ನೀಡಬೇಕಾಗಿದೆ. ನಗರಸಭೆಯೇ ಸಮರ್ಪಕ ಒಳಚರಂಡಿ ಮತ್ತು ಎಸ್‌ಟಿಪಿ ವ್ಯವಸ್ಥೆ ಮಾಡಬೇಕು' ಎಂದು ಬಹುತೇಕರು ಒತ್ತಾಯಿಸಿದರು.

# ಸೀಮೆಎಣ್ಣೆ ದರದಿಂದ ಚಿಂತೆಯಲ್ಲಿ ಸಾಂಪ್ರದಾಯಿಕ ಮೀನುಗಾರರು !



ಕಾರವಾರ: ಬೆಳಕಿನ ಮೀನುಗಾರಿಕೆ, ಬುಲ್ ಟ್ರಾಲ್ ಚಟುವಟಿಕೆಯಿಂದ ಮೀನಿನ ಕೊರತೆಯಿಂದ ಕಂಗೆಟ್ಟಿರುವ ಸಾಂಪ್ರದಾಯಿಕ ಮೀನುಗಾರರಿಗೆ ಸೀಮೆಎಣ್ಣೆ ಬೆಲೆ ದುಬಾರಿ ಆಗಿರುವುದು ಗಾಯದ ಮೇಲೆ ಬರೆ ಎಳೆದಂತೆ ಮಾಡಿದೆ. ಯಾಂತ್ರೀಕೃತ ಮೀನುಗಾರಿಕೆ ಆರಂಭಗೊಳ್ಳುವ ವೇಳೆಗೆ ಕಡಲಿಗೆ ಇಳಿಯಲು ಸಜ್ಜುಗೊಂಡಿರುವ ಮೋಟಾರೀಕೃತ ನಾಡದೋಣಿ ಮೀನುಗಾರರಿಗೆ ಸೀಮೆಎಣ್ಣೆ ಖರೀದಿ ಆರ್ಥಿಕ ಏಟು ನೀಡಬಹುದು ಎಂಬ ಚಿಂತೆ ಕಾಡಲಾರಂಭಿಸಿದೆ. ವರ್ಷದ ಹಿಂದೆ ಪ್ರತಿ ಲೀಟರ್‌ಗೆ 35ಕ್ಕೆ ಸಿಗುತ್ತಿದ್ದ ಸೀಮೆಎಣ್ಣೆ ದರ ಈಗ 62ಕ್ಕೆ ಏರಿಕೆಯಾಗಿರುವುದು ಈ ಚಿಂತೆಗೆ ಕಾರಣ. ಜಿಲ್ಲೆಯಲ್ಲಿ ಪರ್ಸಿನ್, ಟ್ರಾಲರ್ ದೋಣಿಗಳಿಗಿಂತ ನಾಡದೋಣಿಗಳ ಸಂಖ್ಯೆ ಹೆಚ್ಚಿದೆ. 8 ಸಾವಿರದಷ್ಟಿರುವ ನಾಡದೋಣಿಗಳ ಪೈಕಿ 4 ಸಾವಿರದಷ್ಟು ದೋಣಿಗಳು ಮೋಟಾರೀಕೃತವಾಗಿವೆ. ಇಂತಹ ದೋಣಿಗಳಿಗೆ ಸೀಮೆಎಣ್ಣೆ ಬಳಕೆ ಅನಿವಾರ್ಯ. ಯಾಂತ್ರೀಕೃತ ದೋಣಿಗಳಲ್ಲಿ ಟನ್‌ಗಟ್ಟಲೆ ಮೀನು ಹಿಡಿದು ತರಬಹುದು, ಆದರೆ, ನಾಡದೋಣಿಯಲ್ಲಿ ಕೆಲವೇ ಕೆಜಿ ಮೀನು ಹಿಡಿಯಲು ಸಾವಿರಾರು ರೂಪಾಯಿ ವ್ಯಯಿಸಬೇಕಾಗುತ್ತಿದೆ ಎನ್ನುತ್ತಾರೆ ಸಾಂಪ್ರದಾಯಿಕ ಮೀನುಗಾರರು.

# ಪ್ರಯೋಗಾಲಯಗಳಿಗೆ ಆರೋಗ್ಯ ಇಲಾಖೆ ಭೇಟಿ - ಪರಿಶೀಲನೆ



ಮಂಗಳೂರು: ನಗರದ ವಿವಿದೆಡೆ ಕಾರ್ಯಾಚರಿಸುತ್ತಿದ್ದ ವ್ಯದ್ಯಕೀಯ ಪ್ರಯೋಗಾಲಯಗಳಿಗೆ ಅರೋಗ್ಯ ಇಲಾಖೆ ತಂಡ ಶನಿವಾರ ಭೇಟಿ ನೀಡಿ ಪರಿಶೀಲಿಸಿತು. ನಗರದ ಹಂಪನಕಟ್ಟೆ ಪರಿಸರದ ವಿವಿಧ ಪ್ರಯೋಗಾಲಯಗಳಿಗೆ ಭೇಟಿ ನೀಡಿದಾಗ ಅಲ್ಲಿನ ಲೈಸನ್ಸ್ ಅವಧಿ ಮುಕ್ತಾಯವಾಗಿ ಮತ್ತು ನಿಯಮಾನುಸಾರ ಕಾರ್ಯನಿರ್ವಾಹಿಸದಿರುವುದು. ಬಯೋಮೆಡಿಕಲ್ ತ್ಯಾಜ್ಯವನ್ನು ಸಮರ್ಪಕವಾಗಿ ನಿರ್ವಹಿಸದಿರುವ ಪ್ರಕರಣಗಳು ಕಂಡುಬಂದಿದ್ದು, ಇವುಗಳಿಗೆ ನೋಟೀಸ್ ನೀಡಲಾಗಿದೆ. ದೇರಳಕಟ್ಟೆಯ ಪ್ರಯೋಗಾಲಯವೊಂದು ಯಾವುದೇ ದಾಖಲೆಗಳಿಲ್ಲದೆ ಕಾರ್ಯನಿರ್ವಹಿಸುತ್ತಿದ್ದು, ಈ ಹಿಂದೆಯೇ ನೋಟೀಸ್ ನೀಡಿ ಸೂಕ್ತ ಪರವಾನಿಗೆಗಳನ್ನು ಪಡೆಯಲು ಸೂಚಿಸಲಾಗಿತ್ತು. ಆದರೂ ಯಾವುದೇ ಪರವಾನಿಗೆ ಇಲ್ಲದೆ ಮುಂದುವರಿದ್ದರಿಂದ ಈ ಪ್ರಯೋಗಾಲಯಕ್ಕೆ ಬೀಗಮುದ್ರೆ ಜಡಿಯಲಾಯಿತು. ಈ ತಪಾಸಣೆಯಲ್ಲಿ ಜಿಲ್ಲಾ ಅರೋಗ್ಯಾಧಿಕಾರಿ ಡಾ. ತಿಮ್ಮಯ್ಯ, ಅರೋಗ್ಯ ಇಲಾಖೆಯ ಅಧಿಕಾರಿಗಳಾದ ಡಾ. ದೀಪಾ ಪ್ರಭು, ಡಾ. ಚಿರಾಗ್ ಮತ್ತಿತರರು ಇದ್ದರು.

# ಡಿಎಚ್‌ಓ ವಿರುದ್ಧ ಶಿಸ್ತು ಕ್ರಮಕ್ಕೆ ಯಶ್‌ಪಾಲ್ ಸುವರ್ಣ ಆಗ್ರಹ



ಉಡುಪಿ: ಉಡುಪಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯಾಗಿ ಕಳೆದ 4 ತಿಂಗಳಿನಿಂದ ಕರ್ತವ್ಯ ನಿರ್ವಹಿಸುತ್ತಿರುವ ಬಸವರಾಜ ಜಿ.ಹುಬ್ಬಳ್ಳಿ ಕಾರ್ಯ ವೈಖರಿಯ ಬಗ್ಗೆ ಹಲವಾರು ದೂರುಗಳು ಕೇಳಿ ಬರುತ್ತಿರುವ ಹಿನ್ನೆಲೆಯಲ್ಲಿ ತಕ್ಷಣ ಅಧಿಕಾರಿಯ ವಿರುದ್ಧ ತನಿಖೆ ನಡೆಸಿ ಶಿಸ್ತು ಕ್ರಮ ವಹಿಸಬೇಕು ಎಂದು ಉಡುಪಿ ಶಾಸಕ ಯಶ್‌ಪಾಲ್ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದು ಆಗ್ರಹಿಸಿದ್ದಾರೆ. ಅಧೀನ ವೈದ್ಯರು, ವೈದ್ಯಾಧಿಕಾರಿಗಳು, ಶುಶ್ರೂಷಕರು, ಸಿಬ್ಬಂದಿಗಳ ಸೇವಾ ವಿಷಯದಲ್ಲಿ ವ್ಯಾಪಕ ಭ್ರಷ್ಟಾಚಾರವೆಸಗುತ್ತಿರುವ ಬಗ್ಗೆ ಮೌಖಿಕ ದೂರುಗಳು ಬರುತ್ತಿವೆ. ಬಿಲ್ ಪಾವತಿ, ಟೆಂಡರ್ ವಿಷಯಗಳಲ್ಲೂ ನಿಯಮ ಮೀರಿ ಭ್ರಷ್ಟಾಚಾರ ಎಸಗುತ್ತಿರುವ ಬಗ್ಗೆ ಆರೋಪಗಳಿವೆ.

# ಲಾರಿ ಚಾಲಕರಿಂದ ಬೈಕಂಪಾಡಿಯಲ್ಲಿ ಮುಷ್ಕರ



ಮಂಗಳೂರು: ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಇಂಡೇನ್ ಗ್ಯಾಸ್ ಸಿಲಿಂಡರ್ ಸಾಗಾಟ ಲಾರಿ ಚಾಲಕರು ಸೋಮವಾರ ಬೈಕಂಪಾಡಿಯಲ್ಲಿ ಮುಷ್ಕರ ನಡೆಸಿದರು. ಸಿಲಿಂಡರ್ ಸಾಗಾಟ ಲಾರಿ ಚಾಲಕರು ರಸ್ತೆಗೆ ಇಳಿಯದೆ ಪ್ರತಿಭಟನೆಯ ಹಿನ್ನೆಲೆಯಲ್ಲಿ ಸ್ಥಳಕ್ಕೆ ಆಗಮಿಸಿದ ಕರ್ನಾಟಕ ಮತ್ತು ಕೇರಳದ ಗ್ಯಾಸ್ ಕಂಪೆನಿಯ ಅಧಿಕಾರಿಗಳು ಲಾರಿ ಚಾಲಕರ ಸಂಘಟನೆಯ ಧುರೀಣರೊಂದಿಗೆ ಮಾತುಕತೆ ನಡೆಸಿದರು. ಮೂರು ತಿಂಗಳೊಳಗಾಗಿ ಗ್ಯಾಸ್ ಸಿಲಿಂಡರ್‌ಗಳ ಕೊರತೆ ಸಮಸ್ಯೆಯನ್ನು ಬಗೆ ಹರಿಸುವುದಾಗಿ ಭರವಸೆ ನೀಡಿದ ಬಳಿಕ ಚಾಲಕರು ಮುಷ್ಕರವನ್ನು ಹಿಂಪಡೆದರು. ಈ ಸಂದರ್ಭದಲ್ಲಿ ಮಾತನಾಡಿದ ಲಾರಿ ಚಾಲಕ ಹಾಗೂ ಕಣ್ಣೂರಿನ ಸಿಐಟಿಯು ಕಾರ್ಯದರ್ಶಿ ಶಾಜಿ ಅವರು 'ಇಂಡೇನ್ ಗ್ಯಾಸ್ ಸಾಗಾಟ ಲಾರಿಗಳಿಗೆ ಗ್ಯಾಸ್ ಸಿಲಿಂಡರ್ ಪಡೆಯಲು 8-10 ಗಂಟೆಗಳ ಕಾಯಬೇಕಾಗಿದೆ. ಇದರಿಂದಾಗಿ ಚಾಲಕರು ತೊಂದರೆ ಅನುಭವಿಸುತ್ತಿದ್ದಾರೆ. ಇದೀಗ 24 ಗಂಟೆಗಳ ಕಾಯಬೇಕಾದ ಪರಿಸ್ಥಿತಿ ಬಂದಿದೆ. ಈ ಕಾರಣದಿಂದಾಗಿ ನಾವು ಅನಿವಾರ್ಯವಾಗಿ ಸಿಲಿಂಡರ್ ಸಾಗಾಟವನ್ನು ಸ್ಥಗಿತಗೊಳಿಸಿ ಪ್ರತಿಭಟನೆ ಮಾಡಿರುವುದಾಗಿ ತಿಳಿಸಿದರು.

# ಕಂಕನಾಡಿ ರಸ್ತೆ ದುರಸ್ತಿಗೊಳಿಸಲು ಆಗ್ರಹಿಸಿ ಪ್ರತಿಭಟನೆ



ಮಂಗಳೂರು: ಬೃಹತ್ ಗುಂಡಿಗಳಿಂದ ವಾಹನ ಸಂಚಾರಕ್ಕೆ ಅಯೋಗ್ಯವಾಗಿರುವ ರಾಷ್ಟ್ರೀಯ ಹೆದ್ದಾರಿ ಸಂಪರ್ಕಿಸುವ ಕಂಕನಾಡಿ ಬೆಂದೂರ್‌ವೆಲ್ ವರೆಗಿನ ಮುಖ್ಯ ರಸ್ತೆ ದುರಸ್ಥಿಗೆ ಒತ್ತಾಯಿಸಿ ಡಿವೈಎಫ್‌ಐ ಮಂಗಳೂರು ನಗರ ಸಮಿತಿ ನೇತೃತ್ವದಲ್ಲಿ ಕಂಕನಾಡಿ ಕರಾವಳಿ ವೃತ್ತದ ಬಳಿ ಭಿತ್ತಿಪತ್ರ ಪ್ರದರ್ಶನ ನಡೆಯಿತು. ರಸ್ತೆ ದುರಸ್ಥಿ ಮಾಡದಿರುವುದಕ್ಕೆ ತೀವ್ರ ಪ್ರತಿಭಟನೆ ನಡೆಸಿದರು. ಈ ಸಂದರ್ಭ ಮಾತನಾಡಿದ ಡಿವೈಎಫ್‌ಐ ಜಿಲ್ಲಾಧ್ಯಕ್ಷ ಬಿ.ಕೆ ಇಮ್ತಿಯಾಝ್ ಅವರು ಸ್ಮಾರ್ಟ್ ಸಿಟಿ ಯೋಜನೆ ಹೆಸರಿನಲ್ಲಿ ಬಂದಿರುವ ಸಾವಿರಾರು ಕೋಟಿ ಹಣ ವ್ಯರ್ಥವಾಗಿದೆ ನಗರ ಪ್ರವೇಶ ಮಾಡುವ ಮುಖ್ಯ ರಸ್ತೆಯನ್ನೇ ನಿರ್ಲಕ್ಷ್ಯ ಮಾಡಲಾಗಿದೆ. ದಿನನಿತ್ಯ ರಸ್ತೆ ಗುಂಡಿಗಳಿಗೆ ಬಿದ್ದು ಸಾವುನೋವುಗಳು ಸಂಭವಿಸುತ್ತಿದೆ ರಸ್ತೆ ಗುಂಡಿಗಳಿಂದಾಗಿ ಅಪಘಾತ ಸಂಭವಿಸಿದರೆ ಪಾಲಿಕೆ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಜನಪ್ರತಿನಿದಿಗಳು ತಮ್ಮ ಜವಾಬ್ದಾರಿಯನ್ನು ಮರೆತಿದ್ದಾರೆ ಅಧಿಕಾರಿಗಳು ಜಾಣ ಕುರುಡುತನ ಪ್ರದರ್ಶಿಸುತ್ತಿದ್ದಾರೆ ಎಂದು ಆರೋಪಿಸಿದರು.

# ಧರ್ಮಸ್ಥಳದ ಮಹಾದ್ವಾರದಲ್ಲಿ ಗುಂಪುಗಳ ನಡುವೆ ಮಾತಿನ ಚಕಮಕಿ !



ಬೆಳ್ತಂಗಡಿ: ಬೆಂಗಳೂರಿನಿಂದ ಧರ್ಮಸ್ಥಳಕ್ಕೆ ಸೌಜನ್ಯಳಿಗೆ ನ್ಯಾಯಕೊಡಿಸಬೇಕು ಎಂದು ಒತ್ತಾಯಿಸಿ ಪಾದಯಾತ್ರೆ ಮಾಡಿ ಬಂದಿದ್ದ ಬೆಂಗಳೂರು ಯಲಹಂಕದ ಶರಣಬಸಪ್ಪ ಕಬ್ಬ ಮತ್ತು ತಂಡದವರನ್ನು ಸೋಮವಾರ ಧರ್ಮಸ್ಥಳದ ವ್ಯಾಪಾರಿಗಳು ಹಾಗೂ ಸ್ಥಳೀಯರು ಸೇರಿ ಧರ್ಮಸ್ಥಳದ ಮಹಾದ್ವಾರದ ಬಳಿ ತಡೆದ ಹಿನ್ನಲೆಯಲ್ಲಿ ಎರಡು ಗುಂಪಿನ ನಡುವೆ ಮಾತಿನ ಚಕಮಕಿ, ಗಲಾಟೆ ನಡೆದು ಕೆಲ ಕಾಲ ಗೊಂದಲದ ವಾತಾವರಣ ನಿರ್ಮಾಣವಾಯಿತು. ಪೊಲೀಸರು ಮಧ್ಯಪ್ರವೇಶಿ ಪಾದಯಾತ್ರೆ ಬಂದವರನ್ನು ಸುರಕ್ಷಿತವಾಗಿ ಠಾಣೆಗೆ ಕರೆದೊಯ್ದು ಪರಿಸ್ಥಿತಿ ಶಾಂತಗೊಳಿಸಿದ್ದು ಬಳಿಕ ಪಾದಯಾತ್ರಿಕರು ಹಿಂತಿರುಗಿದರು. ಪಾದಯಾತ್ರೆಯಲ್ಲಿ ಬಂದ ಶರಣಬಸಪ್ಪ ಕಬ್ಬ ಹಾಗೂ ಇತರ ಹತ್ತು ಮಂದಿ ಧರ್ಮಸ್ಥಳಕ್ಕೆ ಬಂದರು. ಉಜಿರೆಯಿಂದ ಇವರು ಪಾದಯಾತ್ರೆಯಲ್ಲಿ ಬರುತ್ತಿರುವುದನ್ನೇ ಕಾಯುತ್ತಿದ್ದ ಧರ್ಮಸ್ಥಳದ ಸ್ಥಳೀಯರ ಸುಮಾರು 50ಕ್ಕೂ ಹೆಚ್ಚು ಮಂದಿಯ ತಂಡ ಅವರನ್ನು ಧರ್ಮಸ್ಥಳ ಮುಖ್ಯ ದ್ವಾರದ ಬಳಿ ತಡೆದರು. ಧರ್ಮಸ್ಥಳಕ್ಕೆ ಪ್ರವೇಶಿಸಲು ಅವಕಾಶ ನೀಡುವುದಿಲ್ಲ ಎಂದು ತಡೆದಾಗ ಅಲ್ಲಿ ಗೊಂದಲದ ವಾತಾವರಣ ನಿರ್ಮಾಣವಾಯಿತು.

# ಅಡಿಕೆ ಬೆಳೆ ರೋಗ ನಿರ್ವಹಣೆಗೆ ಸಹಾಯಧನ ಲಭ್ಯ



ಮಂಗಳೂರು: ಜುಲೈ ತಿಂಗಳಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗುತ್ತಿರುವುದರಿಂದ, ಜಿಲ್ಲೆಯ ಹಲವೆಡೆ ಅಡಿಕೆಯಲ್ಲಿ ಕೊಳೆರೋಗ ಕಾಣಿಸಿಕೊಂಡಿರುವುದು ತೋಟಗಾರಿಕೆ ಇಲಾಖೆಯ ಗಮನಕ್ಕೆ ಬಂದಿರುತ್ತದೆ. ಅಲ್ಲದೇ ಮಳೆ ಇದೇ ರೀತಿ ಮುಂದುವರೆದರೆ ಆಗಸ್ಟ್ ತಿಂಗಳ ನಂತರ ಅಡಿಕೆ ಎಲೆ ಚುಕ್ಕೆ ರೋಗ ವ್ಯಾಪಕವಾಗಿ ಹರಡುವ ಸಾಧ್ಯತೆಯಿರುವ ಕಾರಣ ರೈತರು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲು ತಿಳಿಸಲಾಗಿದೆ. ಅಡಿಕೆ ಬೆಳೆಯಲ್ಲಿ ಸಮಗ್ರ ಪೋಷಕಾಂಶ/ಕೀಟ/ರೋಗ ನಿರ್ವಹಣೆ ಸಂಬಂಧ ಗೊಬ್ಬರ/ಸೂಕ್ಷ್ಮ ಪೋಷಕಾಂಶ/ ಕೀಟನಾಶಕ/ ಶಿಲೀಂಧ್ರನಾಶಕಗಳನ್ನು ಖರೀದಿಸುವ ರೈತರಿಗೆ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಮಿಷನ್ ಯೋಜನೆಯ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಉಪಯೋಜನೆಯಡಿ ನವೀನ ತಂತ್ರಜ್ಞಾನಗಳು ಕಾರ್ಯಕ್ರಮದಡಿ ಸಹಾಯ ಧನ ಸೌಲಭ್ಯ ಲಭ್ಯವಿರುತ್ತದೆ. ರೈತರು ಯೋಜನೆಯ ಸದುಪಯೋಗ ಪಡೆದುಕೊಳ್ಳಬಹುದು. ಹೆಚ್ಚಿನ ಮಾಹಿತಿಗೆ ದ.ಕ ತೋಟಗಾರಿಕೆ ಉಪನಿರ್ದೇಶಕ ಮಂಜುನಾಥ ಡಿ-9448999226, ಹಿರಿಯ ತೋಟಗಾರಿಕೆ ನಿರ್ದೇಶಕ ಪ್ರವೀಣ ಕೆ-9449258204 ಸಂಪರ್ಕಿಸಬಹುದು.

# ಮೂಡಬಿದ್ರೆ ಹೆದ್ದಾರಿ ಭೂಸ್ವಾಧೀನ : ಪರಿಹಾರ ಪಾವತಿ



ಮಂಗಳೂರು: ರಾಷ್ಟ್ರೀಯ ಹೆದ್ದಾರಿ ಸಾಣೂರು - ಬಿಕರ್ನಕಟ್ಟೆ ವಿಭಾಗದ ರಸ್ತೆ ಅಗಲೀಕರಣಕ್ಕಾಗಿ ಭೂಸ್ವಾಧೀನ ಪಡಿಸಲಾದ ಜಮೀನಿನ ಮಾಲೀಕರಿಗೆ ಪರಿಹಾರ ಪಾವತಿ ಹಾಗೂ ಕ್ಲೈಮ್‌ಗಳನ್ನು ಪಡೆಯುವ ಅದಾಲತ್ ಕಾರ್ಯಕ್ರಮ ಜುಲೈ 23ರಂದು ಬೆಳಿಗ್ಗೆ 10.30 ಗಂಟೆಗೆ ಮೂಡಬಿದ್ರೆಯ ತಾಲೂಕು ಆಡಳಿತ ಸೌಧ ಕಚೇರಿ ಸಭಾಭವನದಲ್ಲಿ ನಡೆಯಲಿದೆ. ಪುತ್ತಿಗೆ, ಮಾರ್ಪಾಡಿ, ಪಡುಮಾರ್ನಾಡ್, ಬೆಳುವಾಯಿ, ತೆಂಕ ಮಿಜಾರು, ಬಡಗಮಿಜಾರು, ತೋಡಾರು ಗ್ರಾಮಗಳ ಜಮೀನಿನ ಮಾಲೀಕರು ಹೆಚ್ಚಿನ ಸಂಖ್ಯೆಯಲ್ಲಿ ಹಾಜರಾಗಿ ಪರಿಹಾರ ಮೊತ್ತವನ್ನು ಪಡೆಯಬಹುದು. ಅದಾಲತ್ ಕಾರ್ಯಕ್ರಮದಲ್ಲಿ ಪರಿಹಾರ ಪಡೆಯಲು ಕ್ಲೈಮ್ ಸಲ್ಲಿಸಿದ ಭೂಮಾಲೀಕರು ಅವಾರ್ಡ್ ನೋಟಿಸ್‌ನಲ್ಲಿ ತಿಳಿಸಿರುವ ದಾಖಲೆಗಳೊಂದಿಗೆ ಹಾಜರಾಗಿ ಕ್ಲೈಮ್ ಸಲ್ಲಿಸುವಂತೆ ಹಾಗೂ ಈಗಾಗಲೇ ಕ್ಲೈಮ್ ಸಲ್ಲಿಸಿದ ಭೂಮಾಲೀಕರು ಹಾಜರಾಗಿ ಅಗತ್ಯ ದಾಖಲೆಗಳಿಗೆ ಸಹಿ ಮಾಡಬೇಕು. ಈ ಅದಾಲತ್ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭೂ ಸಂತ್ರಸ್ತರು ಭಾಗವಹಿಸಿ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕು ಎಂದು ವಿಶೇಷ ಭೂಸ್ವಾಧೀನಾಧಿಕಾರಿ ಮುಹಮ್ಮದ್ ಇಸಾಕ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆ.11ರಿಂದ 22ರವರೆಗೆ ವಿಧಾನ ಸಭೆಯ ಮುಂಗಾರು ಅಧಿವೇಶನ



ಮಂಗಳೂರು: ವಿಧಾನಸಭೆಯ ಮುಂಗಾರು ಅಧಿವೇಶನವು ಆಗಸ್ಟ್ 11ರಿಂದ 22ರವರೆಗೆ ನಡೆಯಲಿದೆ ಎಂದು ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ತಿಳಿಸಿದರು. ನಗರದ ಸರ್ಕ್ಯೂಟ್ ಹೌಸ್‌ನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಅಧಿವೇಶನದ ಅವಧಿ ವಿಸ್ತರಣೆ ಅಗತ್ಯವಿದ್ದಲ್ಲಿ ಸಂಬಂಧಪಟ್ಟ ಕಮಿಟಿ ಚರ್ಚಿಸಿ ಅಂತಿಮಗೊಳಿಸುತ್ತದೆ ಎಂದರು. ದಕ್ಷಿಣ ಕನ್ನಡ ಜಿಲ್ಲೆಯ ಹೆಸರನ್ನು ಬದಲಾಯಿಸಿ 'ಮಂಗಳೂರು' ಎಂದು ಮರುನಾಮಕರಣ ಮಾಡಬೇಕೆಂಬ ವಿಚಾರ ಚರ್ಚೆಯಲ್ಲಿದೆ. ಹೆಸರಿನ ಹಿಂದೆ ಪರಂಪರೆ, ಇತಿಹಾಸ, ಸಂಸ್ಕೃತಿ ಎಲ್ಲವೂ ಅಡಕವಾಗಿರುತ್ತವೆ. ಹಿರಿಯರು, ಸಾಹಿತಿಗಳು, ಬರಹಗಾರರು, ತಜ್ಞರ ಜೊತೆ ಸಾಧಕ ಬಾಧಕಗಳ ಬಗ್ಗೆ ಚರ್ಚಿಸಿ ಒಮ್ಮತದ ಅಭಿಪ್ರಾಯಕ್ಕೆ ಬರಬೇಕು. ಮಂಗಳೂರು ಅಭಿವೃದ್ಧಿಯಾಗಲು ಹೆಸರಿಗಿಂತ ಈ ನೆಲದಲ್ಲಿ ಸೌಹಾರ್ದ ವಾತಾವರಣ ಬೇಕು. ಅದಕ್ಕೆ ನಾವೆಲ್ಲರೂ ಪ್ರಯತ್ನಿಸಬೇಕು. ಹೆಸರಿಗಿಂತ ಪ್ರೀತಿ, ವಿಶ್ವಾಸ, ಭಯರಹಿತ, ದ್ವೇಷರಹಿತ ಸಮಾಜ ಮಂಗಳೂರಿಗೆ ಅತಿ ಅಗತ್ಯವಾಗಿದೆ.

ಕರಾವಳಿ ತರಂಗಿಣಿ
# ಕಲಾ ತರಂಗಿಣಿ

## 'ಅಪ್ಪು ಕಪ್ ಸೀಸನ್ 3'ಗೆ ಚಾಲನೆ

ಚೇತನ್ ಸೂರ್ಯ ಅವರ STELLER STUDIO & EVENT MANAGEMENT ಸಂಸ್ಥೆ, PRK Audio ಸಂಸ್ಥೆಯ ಸಹಯೋಗ ದೊಂದಿಗೆ 'ಅಪ್ಪು ಕಪ್' (ಶಟಲ್ ಬ್ಯಾಡ್ಮಿಂಟನ್ ಟೂರ್ನಿ) ಎರಡು ಸೀಸನ್ ಅದ್ದೂರಿಯಾಗಿ ನಡೆದಿದೆ. ಕಳೆದ ತಿಂಗಳು 'ಅಪ್ಪು ಕಪ್ ಸೀಸನ್ 3' ಲೀಗ್ ಉದ್ಘಾಟನೆ ಹಾಗೂ ಪಂದ್ಯಗಳು ಆರಂಭವಾಗಲಿದೆ. ಇತ್ತೀಚೆಗೆ ಈ ಲೀಗ್‌ನ ಉದ್ಘಾಟನೆ ಹಾಗೂ ಟೀಮ್ ಆಕ್ಷನ್ ಸಮಾರಂಭ ಅದ್ದೂರಿಯಾಗಿ ನೆರವೇರಿತ್ತು. ಅಶ್ವಿನಿ ಪುನೀತ್ ರಾಜಕುಮಾರ್, ವಿಧಾನ ಪರಿಷತ್ ಸದಸ್ಯರಾದ ಸರವಣ ಚಾಲನೆ ನೀಡಿದ್ದರು. ಲೀಗ್‌ನ ಪೂರ್ವಭಾವಿಯಾಗಿ 'ಅಪ್ಪು ಸಂಭ್ರಮ' ಸಮಾರಂಭ ಆಯೋಜಿಸಲಾಗಿದ್ದು, ಆ ಸಮಾರಂಭದಲ್ಲಿ ಜರ್ಸಿ ಅನಾವರಣ ಮಾಡಲಾಯಿತು. ವಿಧಾನ ಪರಿಷತ್ ಸದಸ್ಯ ಸರವಣ ಜರ್ಸಿ ಅನಾವರಣ ಮಾಡಿದರು. ಚಿತ್ರರಂಗದ ಅನೇಕ ಗಣ್ಯರು, ಲೀಗ್ ನಲ್ಲಿ ಭಾಗವಹಿಸುತ್ತಿರುವ ಕಲಾವಿದರು, ತಂಡಗಳ ಮಾಲೀಕರು ಸಮಾರಂಭದಲ್ಲಿ ಉಪಸ್ಥಿತರಿದ್ದರು. ಜರ್ಸಿ ಅನಾವರಣ ಮಾಡಿ ಮಾತನಾಡಿದ ಸರವಣ ಅವರು, ಚೇತನ್ ಸೂರ್ಯ ನೇತೃತ್ವದಲ್ಲಿ ಕಳೆದ ಎರಡು ಸೀಸನ್ ಗಳನ್ನು ಅದ್ದೂರಿಯಾಗಿ ನಡೆಸಿಕೊಂಡು ಬಂದಿದ್ದಾರೆ. ಈ ಸೀಸನ್ ಸಹ ಅಷ್ಟೇ ಅದ್ದೂರಿಯಾಗಿ ನಡೆಸುತ್ತಾರೆ ಎಂಬ ಭರವಸೆ ಇದೆ. ನಮ್ಮ ಸಾಯಿ ಗೋಲ್ಡ್ ಸಂಸ್ಥೆಯಿಂದ ಹತ್ತು ಲಕ್ಷ ರೂಪಾಯಿಗಳನ್ನು ಈ ಸೀಸನ್‌ಗೆ ನೀಡುತ್ತಿದ್ದೇನೆ. ಜೊತೆಗೆ ಭಾಗವಹಿಸುವ ಪ್ರತಿಯೊಬ್ಬರಿಗೂ ಸಾಯಿ ಗೋಲ್ಡ್ ಪ್ಯಾಲೇಸ್ ವತಿಯಿಂದ ಗಿಫ್ಟ್ ವೋಚರ್ ಸಹ ನೀಡಲಾಗುವುದು ಎಂದು ತಿಳಿಸಿದರು. STELLER STUDIO & EVENT MANAGEMENT ಸಂಸ್ಥೆ, PRK Audio ಸಂಸ್ಥೆಯ ಸಹಯೋಗದೊಂದಿಗೆ 'ಅಪ್ಪು ಕಪ್ ಸೀಸನ್ 3' ಅದ್ದೂರಿಯಾಗಿ ಆಯೋಜಿಸಲು ನಿರ್ಧರಿಸಲಾಗಿದೆ. ಹತ್ತು ಕೆಜಿ ತೂಕವಿರುವ ಅಪ್ಪು ಅವರ ಪ್ರತಿಮೆಯ ಬೆಳ್ಳಿ ಕಪ್ ಸತತ ಮೂರು ಸೀಸನ್‌ಗಳನ್ನು ಗೆದ್ದ ತಂಡದ ಪಾಲಾಗುತ್ತದೆ.



## ಜುಲೈ 25ರಂದು 'ಮಹಾವತಾರ ನರಸಿಂಹ'

ಕರ್ನಾಟಕದಲ್ಲಿ ಹೊಂಬಾಳೆ ಫಿಲ್ಮ್ಸ್ ಸಂಸ್ಥೆಯಿಂದ ಬಿಡುಗಡೆ ಡಾ. ರಾಜಕುಮಾರ್ ಹಾಗೂ ಪುನೀತ್ ರಾಜಕುಮಾರ್ ಅಭಿನಯದ 'ಭಕ್ತ ಪ್ರಹ್ಲಾದ' ಚಿತ್ರವು ಕನ್ನಡದ ಅತ್ಯುತ್ತಮ ಚಿತ್ರಗಳ ಪೈಕಿ ಒಂದು. ಭಕ್ತ ಪ್ರಹ್ಲಾದ ಮತ್ತು ನರಸಿಂಹಾವತಾರ ಕಥೆಯನ್ನು ಮುಂದಿನ ತಲೆಮಾರಿನವರಿಗೆ ತಿಳಿಸಲು ಒಂದು ಅನಿಮೇಷನ್ ಚಿತ್ರ ತಯಾರಾಗಿದೆ. ಆ ಚಿತ್ರದ ಹೆಸರು 'ಮಹಾವತಾರ ನರಸಿಂಹ'. ಈಗಾಗಲೇ ಚಿತ್ರದ ಟ್ರೇಲರ್ ಚಿತ್ರಪ್ರೇಮಿಗಳ ಹೃದಯ ಗೆದ್ದಿದೆ. ಇದೇ ಜುಲೈ 25ರಂದು ಕನ್ನಡ ಸೇರಿದಂತೆ ಹಿಂದಿ, ತಮಿಳು, ತೆಲುಗು ಹಾಗೂ ಮಲಯಾಳಂ ಭಾಷೆಗಳಲ್ಲಿ ದೇಶಾದ್ಯಂತ ಬಿಡುಗಡೆ ಆಗುತ್ತಿದೆ. ಕನ್ನಡದಲ್ಲಿ ಈ ಚಿತ್ರವನ್ನು ಪ್ರತಿಷ್ಠಿತ ಚಿತ್ರ ನಿರ್ಮಾಣ ಸಂಸ್ಥೆಯಾದ ಹೊಂಬಾಳೆ ಫಿಲ್ಮ್ಸ್ ಅರ್ಪಿಸುವುದರ ಜೊತೆಗೆ ರಾಜ್ಯಾದ್ಯಂತ ಬಿಡುಗಡೆ ಮಾಡುತ್ತಿದೆ. ಮಂಗಳವಾರ ಸಂಜೆ ನಡೆದ ಪತ್ರಿಕಾಗೋಷ್ಠಿಯಲ್ಲಿ ಚಿತ್ರದ ನಿರ್ದೇಶಕ ಅಶ್ವಿನ್ ಕುಮಾರ್ ಮಾತನಾಡಿ, '2018ರಲ್ಲಿ ಗೆಳೆಯರು ಸೇರಿ ಭಕ್ತ ಪ್ರಹ್ಲಾದ ಬಗ್ಗೆ ಚರ್ಚೆ ಮಾಡಿದೆವು. ಆ ನಂತರ ನರಸಿಂಹ ಸ್ವಾಮಿ ಕುರಿತು ಸಿನಿಮಾ ಮಾಡಲು ಕನ್ನಡದ 'ಭಕ್ತ ಪ್ರಹ್ಲಾದ' ಚಿತ್ರ ಸೇರಿದಂತೆ ಹಲವು ಚಿತ್ರಗಳು ಮತ್ತು ಪುರಾಣಗಳನ್ನು ಓದಿ ಚಿತ್ರಕಥೆ ಮಾಡಲಾಗಿದೆ. ಈ 'ಮಹಾವತಾರ ನರಸಿಂಹ' ಚಿತ್ರಕ್ಕಾಗಿ ನಮ್ಮ ತಂಡ ಐದು ವರ್ಷ ಶ್ರಮ ಹಾಕಿದೆ. ಮುಖ್ಯವಾಗಿ ನಾವು ಈ ಚಿತ್ರವನ್ನು 'ಭಕ್ತ ಪ್ರಹ್ಲಾದ' ಚಿತ್ರವನ್ನು ಮೂಲವಾಗಿಟ್ಟುಕೊಂಡು ಚಿತ್ರ ಮಾಡಿದ್ದೇವೆ. ಸಂಪೂರ್ಣ ಅನಿಮೇಷನ್ ಚಿತ್ರ ಮಾಡುವುದು ಸುಲಭದ ಮಾತಲ್ಲ, ಸಾಕಷ್ಟು ತಾಂತ್ರಿಕ ಸಮಸ್ಯೆಗಳಿದ್ದು, ಅದನ್ನೆಲ್ಲಾ ಮೀರಿ ನಾಲ್ಕೂವರೆ ವರ್ಷಗಳಲ್ಲಿ ಈ ಚಿತ್ರ ರೂಪಿಸಿದ್ದೇವೆ. ಈ ಸರಣಿಯ ಮುಂದುವರೆದ ಭಾಗವಾಗಿ 'ಮಹಾವತಾರ ಪರಶುರಾಮ' ಮಾಡಲು ಯೋಜನೆ ಹಾಕಿಕೊಂಡಿದ್ದೇವೆ' ಎಂದು ಮಾಹಿತಿ ನೀಡಿದರು. ಈ ಚಿತ್ರವನ್ನು ಅಶ್ವಿನ್ ಕುಮಾರ್ ಪತ್ನಿ ಶಿಲ್ಪಾ ಧವನ್ ನಿರ್ಮಿಸಿದ್ದಾರೆ. ಹೊಂಬಾಳೆ ಫಿಲ್ಮ್ಸ್ ಸಂಸ್ಥೆಯ ಆಶೀರ್ವಾದದಿಂದ ಚಿತ್ರವನ್ನು ಬಿಡುಗಡೆ ಮಾಡುತ್ತಿದ್ದೇವೆ ಎಂದ ಅವರು, 'ಹೊಂಬಾಳೆ ಸಂಸ್ಥೆ ಜೊತೆ ಕೈ ಜೋಡಿಸಿದ್ದು ತುಂಬಾ ಖುಷಿ ಇದೆ ಎಂದರು.



## ಯಶ್ ತಾಯಿ ನಿರ್ಮಾಣದ 'ಕೊತ್ತಲವಾಡಿ' ಟ್ರೇಲರ್ ರಿಲೀಸ್

ರಾಕಿಂಗ್ ಸ್ಟಾರ್ ಯಶ್ ತಾಯಿ ಪುಷ್ಪ ಅರುಣ್ ಕುಮಾರ್ ನಿರ್ಮಾಣದ ಕೊತ್ತಲವಾಡಿ ಸಿನಿಮಾದ ಟ್ರೇಲರ್ ರಿಲೀಸ್ ಆಗಿದೆ. 'ಕೊತ್ತಲವಾಡಿ' ಎಂಬ ಊರಿನಲ್ಲಿ ನಡೆಯುವ ಕಥೆ ಇದಾಗಿದ್ದು, ರಾಜಕೀಯ ದಂಗಲ್, ಪೊಲೀಸ್ ವ್ಯವಸ್ಥೆ, ಅವಕಾಶವಾದಿತನ, ನಾಯಕನ ಹೋರಾಟ, ಛಲ ಸುತ್ತ ಸಿನಿಮಾ ಸಾಗುತ್ತದೆ. ಹಳ್ಳಿ ಹೈದನಾಗಿ ಪೃಥ್ವಿ ಅಂಬರ್ ರಗಡ್ ಅವತಾರ ತಾಳಿದ್ದು, ನಾಯಕಿಯಾಗಿ ಕಾವ್ಯಾ ಶೈವ ನಟಿಸಿದ್ದಾರೆ. ಗೋಪಾಲ ದೇಶಪಾಂಡೆ ಅದ್ಭುತ ಪಾತ್ರದಲ್ಲಿ ಅಭಿನಯಿಸಿದ್ದಾರೆ. ರಾಜೇಶ್ ನಟರಂಗ ಅವರು ಪೊಲೀಸ್ ಅಧಿಕಾರಿಯ ಪಾತ್ರದಲ್ಲಿ ನಟಿಸಿದ್ದಾರೆ. ಟ್ರೇಲರ್ ಬಿಡುಗಡೆ ಬಳಿಕ ಮಾತನಾಡಿದ ಪುಷ್ಪ ಅರುಣ್ ಕುಮಾರ್, ಆಗಸ್ಟ್ 1ಕ್ಕೆ ಸಿನಿಮಾ ಬರ್ತಿದೆ. ಜನ ಈ ಚಿತ್ರ ಹೇಗೆ ತೆಗೆದುಕೊಳ್ತಾರೋ ಎಂಬ ಭಯವಿದೆ. ಜನ ನಮ್ಮ ಕೈಬಿಡುವುದಿಲ್ಲ ಎಂಬ ನಂಬಿಕೆ ಇದೆ. ಸೆಲೆಬ್ರಿಟಿ ಮನೆಯವರಾಗಿ ಭಯ ಭಕ್ತಿಯಿಂದ ಸಿನಿಮಾ ಮಾಡಿದ್ದೇವೆ. ಯಶ್‌ಗೆ ಏನೋ ಹೇಳದೇ ಮಾಡಿಲ್ಲ. ಮನೆಯಲ್ಲಿರುವ ಬಾಸ್ ನೋಡಿ ನಮಗೆ ಸ್ಫೂರ್ತಿ ಪಡೆದು ಸಿನಿಮಾ ಮಾಡಿದ್ದೇವೆ ಎಂದರು. ನಿರ್ದೇಶಕ ಶ್ರೀರಾಜ್ ಮಾತನಾಡಿ, ಖುಷಿ ಅನ್ನೋವುದಕ್ಕಿಂತ ಇದು ಜವಾಬ್ದಾರಿ. ಆಡಿಯನ್ಸ್ ನೋಡಿ ಚಿತ್ರಕ್ಕೆ ಪ್ರತಿಕ್ರಿಯೆ ಕೊಡಬೇಕು. ಆಗಸ್ಟ್ 1ಕ್ಕೆ ಟ್ರೇಲರ್ ಬಿಟ್ಟಿದ್ದೇವೆ. ಈ ಕಥೆ ಶುರುವಾದಾಗ ಪುಷ್ಪ ಅಮ್ಮನ ಚರ್ಚೆ ಮಾಡಿದೆ. ಯಾವುದಕ್ಕೂ ಕಾಂಪ್ರಮೈಸ್ ಬೇಡ. ನಿನಗೆ ಏನೂ ಬೇಕೋ ಅದು ತೆಗೆದುಕೊ ಎನ್ನುತ್ತಿದ್ದರು ಎಂದರು.



## ಬಂದೂಕ್ ಜುಲೈ 25ಕ್ಕೆ ರಿಲೀಸ್

ಸಿನಿಮಾ ಎಂಬ ಬಣ್ಣದ ಲೋಕಕ್ಕೆ ಪ್ರತಿಭಾನ್ವಿತ ನಟ-ನಟಿಯರು, ನಿರ್ದೇಶಕರ ಪ್ರವೇಶ ಮುಂದುವರೆದಿದೆ. ಕಠಿಣ ಪರಿಶ್ರಮ, ಪ್ರತಿಭೆ ಜೊತೆಗೆ ಕೆಲವೊಮ್ಮೆ ಅದೃಷ್ಟವೂ ಬೇಕಾಗುತ್ತದೆ. ಈ ಚಿತ್ರರಂಗ ಕೆಲವರ ಕೈಹಿಡಿದರೆ, ಹಲವರು ಒಂದೆರಡು ಸಿನಿಮಾಗಳ ನಂತರ ಸುಮ್ಮನಾಗುತ್ತಾರೆ. ಬಹುತೇಕರು ಏಳು-ಬೀಳುಗಳ ನಡುವೆ ಪ್ರೇಕ್ಷಕರನ್ನು ಮನರಂಜಿಸುವುದನ್ನು ಮುಂದುವರೆಸುತ್ತಾರೆ. ಅದಕ್ಕೆ ನಿರಂತರ ಪರಿಶ್ರಮ, ಧೈರ್ಯ ಅಗತ್ಯ. ಇದೀಗ 'ಬಂದೂಕ್' ಚಿತ್ರತಂಡ ಪ್ರೇಕ್ಷಕರನ್ನು ತಲುಪುವ ಪ್ರಯತ್ನದಲ್ಲಿದೆ. ಯುವ ಪ್ರತಿಭೆ ಮಹೇಶ್ ರವಿಕುಮಾರ್ ಸಾರಥ್ಯದಲ್ಲಿ ಮೂಡಿಬಂದಿರುವ ಈ ಸಿನಿಮಾದ ಟ್ರೇಲರ್ ರಿಲೀಸ್ ಆಗಿದ್ದು, ನಿರೀಕ್ಷೆ ಹೆಚ್ಚಿಸಿದೆ. ಜುಲೈ 25ಕ್ಕೆ ಬಂದೂಕ್ ತೆರೆಗೆ ಬರ್ತಿದೆ. ಈ ಹಿನ್ನೆಲೆ ಚಿತ್ರತಂಡ ಸುದ್ದಿಗಾರರೊಂದಿಗೆ ಹಲವು ವಿಷಯ ಹಂಚಿಕೊಂಡಿದೆ. ಬೆಂಗಳೂರಿನ ಎಸ್‌ಆರ್‌ವಿ ಥಿಯೇಟರ್‌ನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ನಿರ್ದೇಶಕ ಮಹೇಶ್ ರವಿಕುಮಾರ್, ಮೂರು ವರ್ಷದ ಮುಂಚೆ ಶುರುವಾದ ಐಡಿಯಾ. ಬಂದೂಕ್‌ನಲ್ಲಿ ಆರು ಚೇಂಬರ್ ಇರುತ್ತದೆ. ನಮ್ಮ ಸಿನಿಮಾದಲ್ಲಿ ಐದು ಚೇಂಬರ್ ಇರುವ ಗನ್ ಯೂಸ್ ಮಾಡಿರುತ್ತೇವೆ. ಆ ಗನ್ ಎಲ್ಲಾ ಪಾತ್ರಗಳಿಗೂ ಕನೆಕ್ಟ್ ಆಗು ತ್ತದೆ. ಹೀಗಾಗಿ ಬಂದೂಕ್ ಎಂದು ಹೆಸರಿಟ್ಟಿದ್ದೇವೆ. ಇದು ನನ್ನ ಮೊದಲ ಸಿನಿಮಾ. ಒಂದಷ್ಟು ಕಿರು ಚಿತ್ರ ಮಾಡಿದ್ದೇನೆ ಎಂದು ಹೇಳಿದರು. ಯುವ ಪ್ರತಿಭೆ ಮಹೇಶ್ ರವಿಕುಮಾರ್ ಕಥೆ ಬರೆದು, ಆಕ್ಷನ್ ಕಟ್ ಹೇಳಿರೋ ಚೊಚ್ಚಲ ಚಿತ್ರ ಬಂದೂಕ್ ಚಿತ್ರದಲ್ಲಿ ಯುವ ಪ್ರತಿಭೆ ಪಾರ್ಥ ಮುಖ್ಯಭೂಮಿಕೆಯಲ್ಲಿ ಅಭಿನಯಿಸಿದ್ದಾರೆ.



## ಕ್ರಿಶ್ ಮ್ಯೂಸಿಕ್‌ನಲ್ಲಿ 'ಓಂ ಶಿವಂ' ಹಾಡುಗಳ ಬಿಡುಗಡೆ

ಚಿತ್ರರಂಗದಲ್ಲಿ ಸುಮಾರು 13 ವರ್ಷಗಳ ಅನುಭವ ಹೊಂದಿರುವ ಅಲ್ವಿನ್ ಮೊದಲ ಬಾರಿ ನಿರ್ದೇಶನ ಮಾಡಿರುವ 'ಓಂ ಶಿವಂ' ಚಿತ್ರದ ಹಾಡುಗಳು ಇತ್ತೀಚೆಗೆ ಕ್ರಿಶ್ ಮ್ಯೂಸಿಕ್ ಯೂಟ್ಯೂಬ್ ಚಾನೆಲ್‌ನಲ್ಲಿ ಬಿಡುಗಡೆ ಆಗಿವೆ. ವಿಜಯ್ ಯಾರ್ಡ್ಲಿ ಸಂಗೀತ ಸಂಯೋಜಿಸಿರುವ ಈ ಚಿತ್ರದಲ್ಲಿ ಒಟ್ಟು ನಾಲ್ಕು ಗೀತೆಗಳಿವೆ. ಶಿವನ ಕುರಿತಾದ ಒಂದು ಗೀತೆಯನ್ನು ಸಂಸ್ಕೃತದಲ್ಲಿ ರಚಿಸಿರುವುದು ವಿಶೇಷ. ಉಳಿದ ಮೂರು ಗೀತೆಗಳಿಗೆ ಕವಿರಾಜ್, ಡಾ.ವಿ.ನಾಗೇಂದ್ರ ಪ್ರಸಾದ್ ಹಾಗೂ ಗೌಸ್‌ಪೀರ್ ಸಾಹಿತ್ಯ ಬರೆದಿದ್ದಾರೆ. ಚಿತ್ರವನ್ನು ದೀಪಾ ಮೂವೀಸ್ ಬ್ಯಾನರ್‌ನಲ್ಲಿ ಕೆ.ಎನ್. ಕೃಷ್ಣ ನಿರ್ಮಾಣ ಮಾಡಿದ್ದಾರೆ. ಇವರ ಮಗ ಭಾರ್ಗವ್ ಕೃಷ್ಣ ಚಿತ್ರದ ನಾಯಕನಾಗಿ ಅಭಿನಯ ಮಾಡಿದ್ದಾರೆ. ಮೂಲತಃ ರಂಗಭೂಮಿ ಕಲಾವಿದರಾದ ಅಲ್ವಿನ್ ಸುಮಾರು 600ಕ್ಕೂ ಹೆಚ್ಚು ಬಿದಿ ನಾಟಕಗಳನ್ನು ಮಾಡಿದ್ದಾರೆ. ಇದೀಗ 'ಓಂ ಶಿವಂ' ಸಿನಿಮಾ ಮೂಲಕ ನಿರ್ದೇಶಕರಾಗಿ ಚಿತ್ರರಂಗ ಪ್ರವೇಶ ಮಾಡಿದ್ದಾರೆ. ಸಿನಿಮಾ ಬಗ್ಗೆ ಮಾತನಾಡುವ ನಿರ್ದೇಶಕರು 'ಚಿತ್ರದಲ್ಲಿ ನಾಲ್ಕು ಸಾಂಗ್‌ಗಳು ಇವೆ ಎಂದರು.



## 'ಪೆದ್ದಿ'ಗಾಗಿ ರಾಮ್‌ಚರಣ್ ಬೀಸ್ಟ್ ಮೂಡ್

ಗ್ಲೋಬಲ್ ಸ್ಟಾರ್ ರಾಮ್‌ಚರಣ್ ನಟಿಸುತ್ತಿರುವ ಬಹುನಿರೀಕ್ಷಿತ ಸಿನಿಮಾ ಪೆದ್ದಿ. ಈಗಾಗಲೇ ರಿಲೀಸ್ ಆಗಿರುವ ಟೀಸರ್ ಚಿತ್ರದ ಮೇಲಿನ ನಿರೀಕ್ಷೆ ಹೆಚ್ಚಿಸಿದೆ. ತಮ್ಮ ಪಾತ್ರಕ್ಕಾಗಿ ರಾಮ್ ಭರ್ಜರಿಯಾಗಿ ಸಿದ್ಧತೆ ನಡೆಸಿದ್ದಾರೆ. ಜಿಮ್‌ನಲ್ಲಿ ದೇಹ ಹುರಿಗೊಳಿಸಿ ರಗಡ್ ಅವತಾರದಲ್ಲಿ ರಾಮ್‌ಚರಣ್ ಕಾಣಿಸಿಕೊಂಡಿದ್ದಾರೆ. ಪಾತ್ರಕ್ಕಾಗಿ ಮೆಗಾ ಪವರ್ ಸ್ಟಾರ್, ಸಿಕ್ಕಾಪಟ್ಟೆ ವರ್ಕೌಟ್ ಮಾಡಿದ್ದಾರೆ. ಸದ್ಯ ರಾಮ್‌ಚರಣ್ ತಮ್ಮ ಪಾತ್ರಕ್ಕಾಗಿ ಕಂಪ್ಲೀಟ್ ತಯಾರಾಗಿದ್ದು, ನಾಳೆಯಿಂದ ಮತ್ತೆ ಪೆದ್ದಿ ಸಿನಿಮಾದ ಶೂಟಿಂಗ್ ಶುರುವಾಗಲಿದೆ. ಉಪ್ಪೇನ ನಿರ್ದೇಶಕ ಬುಚ್ಚಿಬಾಬು ಸನಾ ನಿರ್ದೇಶನ ಪೆದ್ದಿ ಸ್ಪೋರ್ಟ್ಸ್ ಆಕ್ಷನ್ ಡ್ರಾಮಾ ಕಥಾಹಂದರವೊಂದಿದೆ. ರಾಮ್‌ಚರಣ್‌ಗೆ ಜಾನ್ವಿ ಕಪೂರ್ ನಾಯಕಿಯಾಗಿ ನಟಿಸಿದ್ದಾರೆ. ಜಗಪತಿ ಬಾಬು ಮತ್ತು ದಿವೇಂದು ಶರ್ಮಾ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ. 2026ರ ಮಾರ್ಚ್ 27ಕ್ಕೆ 'ಪೆದ್ದಿ' ಸಿನಿಮಾ ಬಿಡುಗಡೆ ಆಗಲಿದೆ. ಅಂದು ರಾಮ್‌ಚರಣ್ ಹುಟ್ಟು ಹಬ್ಬ. ಆ ಕಾರಣದಿಂದ ಅಭಿಮಾನಿಗಳ ಪಾಲಿಗೆ 'ಪೆದ್ದಿ' ಸಿನಿಮಾದ ಬಿಡುಗಡೆ ಸಖತ್ ಸ್ಪೆಷಲ್ ಆಗಿರಲಿದೆ. ಇದೇ ಸಿನಿಮಾದಲ್ಲಿ ಕನ್ನಡದ ಸ್ಟಾರ್ ನಟ ಶಿವರಾಜ್ಕುಮಾರ್ ಕೂಡ ಅಭಿನಯಿಸುತ್ತಿದ್ದಾರೆ.



## 'S/o ಮುತ್ತಣ್ಣ' ಆಗಸ್ಟ್ 22ರಂದು ತೆರೆಗೆ

ಪುರಾತನ ಫಿಲಂಸ್ ನಿರ್ಮಾಣದ, ಶ್ರೀಕಾಂತ್ ಹುಣಸೂರು ನಿರ್ದೇಶನದ ಹಾಗೂ ಡೈನಾಮಿಕ್ ಸ್ಟಾರ್ ದೇವರಾಜ್ ಅವರ ದ್ವಿತೀಯ ಪುತ್ರ ಪ್ರಣಂ ದೇವರಾಜ್ ನಾಯಕನಾಗಿ ಹಾಗೂ 'ದಿಯಾ' ಖ್ಯಾತಿಯ ಖುಷಿ ರವಿ ನಾಯಕಿಯಾಗಿ ನಟಿಸಿರುವ 'S/O ಮುತ್ತಣ್ಣ' ಚಿತ್ರಕ್ಕಾಗಿ ಯೋಗರಾಜ್ ಭಟ್ ಅವರು ಬರೆದಿರುವ, ಸಂಜಿತ್ ಹೆಗ್ಡೆ ಹಾಡಿರುವ ಹಾಗೂ ಸಚಿನ್ ಬಸ್ರೂರ್ ಸಂಗೀತ ನೀಡಿರುವ "ಮಿಡ್ ನೈಟ್ ರಸ್ತೆಯಲ್ಲಿ" ಎಂಬ ಹಾಡು ಇತ್ತೀಚೆಗೆ ಬಿಡುಗಡೆಯಾಯಿತು. ಬಿಡುಗಡೆಯಾದ ತಕ್ಷಣದಿಂದಲೇ ಹಾಡಿಗೆ ಮೆಚ್ಚುಗೆಯ ಮಹಾಪೂರವೇ ಹರಿದು ಬರುತ್ತಿದೆ. ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗುತ್ತಿದೆ. ಹಾಡು ಬಿಡುಗಡೆ ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. ಮೊದಲ ಹಾಡು "ಕಮ್ಮಂಗಿ ನನ್ ಮಗನೇ" ಸಹ ಮೆಚ್ಚುಗೆ ಪಡೆದುಕೊಂಡಿದೆ. ಇಂದು ಬಿಡುಗಡೆಯಾಗಿರುವ "ಮಿಡ್‌ನೈಟ್ ರಸ್ತೆಯಲ್ಲಿ" ಹಾಡನ್ನು ಸಂಜಿತ್ ಹೆಗ್ಡೆ ಹಾಡಿದ್ದಾರೆ. ಯೋಗರಾಜ್ ಭಟ್ ಅವರು ಬರೆದಿದ್ದಾರೆ. ಉಳಿದ ಎರಡು ಹಾಡುಗಳು ಸಹ ಸದ್ಯದಲ್ಲೇ ಬಿಡುಗಡೆಯಾಗಲಿದೆ ಎಂದು ಹಾಡುಗಳ ಬಗ್ಗೆ ಸಂಗೀತ ನಿರ್ದೇಶಕ ಸಚಿನ್ ಬಸ್ರೂರ್ ಮಾಹಿತಿ ನೀಡಿದರು.



## 'ಕಾಂತಾರ ಚಾಪ್ಟರ್ 1' ಮೇಕಿಂಗ್ ವಿಡಿಯೋ ಬಿಡುಗಡೆ

ರಾಜಕುಮಾರ, ಕೆಜಿಎಫ್, ಸಲಾರ್, ಕಾಂತಾರಾದಂತಹ ಬ್ಲಾಕ್‌ಬಸ್ಟರ್ ಚಿತ್ರಗಳನ್ನು ನೀಡಿದ ಹೊಂಬಾಳೆ ಫಿಲ್ಮ್ಸ್, ಇಂದು ನಟ ಮತ್ತು ನಿರ್ದೇಶಕ ರಿಷಬ್ ಶೆಟ್ಟಿ ಅವರ 'ಕಾಂತಾರ ಚಾಪ್ಟರ್ 1' ಸಿನಿಮಾದ ಮೇಕಿಂಗ್ ವಿಡಿಯೋವನ್ನು ರಿಲೀಸ್ ಮಾಡಿದೆ. ಈ ವಿಡಿಯೋ, ಸಿನಿಮಾಕ್ಕಾಗಿ ಹಾಕಿದ ಭಾರಿ ಶ್ರಮ ಮತ್ತು ಅದ್ದೂರಿತನವನ್ನು ಕಣ್ತುಂಬಿಕೊಳ್ಳುವ ಅವಕಾಶವನ್ನು ಪ್ರೇಕ್ಷಕರಿಗೆ ನೀಡಿದೆ. ಚಿತ್ರೀಕರಣ ಮುಗಿದ ಸಂಭ್ರಮದಲ್ಲಿ ಬಿಡುಗಡೆಯಾಗಿರುವ ಈ ವಿಡಿಯೋ, 250 ದಿನಗಳಿಗೂ ಹೆಚ್ಚು ಕಾಲ ನಡೆದ ಶೂಟಿಂಗ್ ಪಯಣವನ್ನು ತೋರಿಸುತ್ತದೆ. 3 ವರ್ಷಗಳ ನಿರಂತರ ಶ್ರಮದ ಫಲವೇ ಈ ಸಿನಿಮಾ. ಸಾವಿರಾರು ಸಿಬ್ಬಂದಿ ಪ್ರತಿ ಹಂತದಲ್ಲೂ ಹಗಲಿರುಳು ಕೆಲಸ ಮಾಡಿದ್ದಾರೆ. ಈ ಮೇಕಿಂಗ್ ವಿಡಿಯೋ ರಿಷಬ್ ಶೆಟ್ಟಿ ಕಥೆ ಹೇಳುವ ಶೈಲಿ ಮತ್ತು ಅವರ ನಿಖರತೆಗೆ ಗೌರವವಾಗಿದೆ. 'ಕಾಂತಾರ ಚಾಪ್ಟರ್ 1' ಹೊಂಬಾಳೆ ಫಿಲ್ಮ್ಸ್‌ನ ಮಹತ್ವಾಕಾಂಕ್ಷೆಯ ಯೋಜನೆಗಳಲ್ಲಿ ಒಂದಾಗಿದೆ.



## ರಿಯಲ್ ಸ್ಟಾರ್ ಉಪೇಂದ್ರ ಹೊಸ ಸಿನಿಮಾ ಅನೌನ್ಸ್

ಕನ್ನಡ ಚಿತ್ರರಂಗದ ಡೈರೆಕ್ಟರ್ಸ್‌ಗಳ ಡೈರೆಕ್ಟರ್ಸ್ ಎನಿಸಿಕೊಂಡಿರುವ ರಿಯಲ್ ಸ್ಟಾರ್ ಉಪೇಂದ್ರ ಈಗ 'ನೆಕ್ಸ್ಟ್ ಲೆವೆಲ್' ಸಿನಿಮಾ ಬೆನ್ನತ್ತಿದ್ದಾರೆ. ಈ ಚಿತ್ರಕ್ಕೆ 'ನೆಕ್ಸ್ಟ್ ಲೆವೆಲ್' ಎಂಬ ಟೈಟಲ್ ಇಡಲಾಗಿದೆ. ಇದು ಪ್ಯಾನ್ ಇಂಡಿಯಾ ಚಿತ್ರವಾಗಿದ್ದು, ಅರವಿಂದ್ ಕೌಶಿಕ್ ನಿರ್ದೇಶನದಲ್ಲಿ ತರುಣ್ ಶಿವಪ್ಪ ನಿರ್ಮಾಣದಲ್ಲಿ ನೆಕ್ಸ್ಟ್ ಲೆವೆಲ್ ಸಿನಿಮಾ ಮೂಡಿ ಬರುತ್ತಿದೆ. ಉಪೇಂದ್ರ ಅವರ ಸಿನಿಮಾಗಳು ಅಂದ್ರೆ ನೆಕ್ಸ್ಟ್ ಲೆವೆಲ್ ಇರುತ್ತದೆ. ಈಗ ನೆಕ್ಸ್ಟ್ ಲೆವೆಲ್ ಸಿನಿಮಾವನ್ನು ಮತ್ತೊಂದು ಲೆವೆಲ್‌ಗೆ ತಯಾರಿಸಲು ಚಿತ್ರತಂಡ ಸಜ್ಜಾಗಿದೆ. ನಿರ್ಮಾಪಕ ತರುಣ್ ಶಿವಪ್ಪ ಅವರ ತರುಣ್ ಸ್ಟುಡಿಯೋಸ್ ಬ್ಯಾನರ್ ನಡಿ ಈ ಚಿತ್ರ ನಿರ್ಮಾಣವಾಗುತ್ತಿದೆ. ಈ ಸಂಸ್ಥೆಯಡಿ ತಯಾರಾಗುತ್ತಿರುವ ಚೊಚ್ಚಲ ಪ್ಯಾನ್ ಇಂಡಿಯಾ ಚಿತ್ರ ಇದಾಗಿದ್ದು, ಪ್ಯಾನ್ ಪ್ರೇಕ್ಷಕರನ್ನು ಗುರಿಯಾಗಿ ಇಟ್ಟುಕೊಂಡೆ ಸಿನಿಮಾ ಮಾಡಲಾಗುತ್ತದೆ.



## 'ಚೌಕಿದಾರ್'ಗಾಗಿ ಬಂದ ರೀ-ರೆಕಾರ್ಡಿಂಗ್ ಸ್ಪೆಷಾಲಿಸ್ಟ್ ಎಸ್.ಚಿನ್ನಾ

ರೀರೆಕಾರ್ಡಿಂಗ್‌ನಲ್ಲಿ 'ಚೌಕಿದಾರ್'ಶೀಘ್ರದಲ್ಲೇ ಪೃಥ್ವಿ ಅಂಬರ್-ಧನ್ಯಾ ರಾಮ್ ಕುಮಾರ್ ಚಿತ್ರ ರಿಲೀಸ್ ರಥಾವರ ಸಾರಥಿ ಚಂದ್ರಶೇಖರ್ ಬಂಡಿಯಪ್ಪ 'ಚೌಕಿದಾರ್' ಸಿನಿಮಾ ಮೂಲಕ ಮತ್ತೊಮ್ಮೆ ಬೆಳ್ಳಿಪರದೆಯಲ್ಲಿ ಚಮತ್ಕಾರ ಮಾಡಲು ಹೊರಟಿದ್ದಾರೆ. ಈಗಾಗಲೇ ರಿಲೀಸ್ ಆಗಿರುವ ಟೀಸರ್ ಹಾಗೂ ಹಾಡುಗಳಿಗೆ ಒಳ್ಳೆ ರೆಸ್ಪಾನ್ಸ್ ಸಿಕ್ಕಿದೆ. ಇದೀಗ ಚಿತ್ರತಂಡ, ರೀ-ರೆಕಾರ್ಡಿಂಗ್‌ನಲ್ಲಿ ಬ್ಯುಸಿಯಾಗಿದೆ. ಚೌಕಿದಾರ್ ಸಿನಿಮಾದ ರೀ ರೆಕಾರ್ಡಿಂಗ್‌ಗೆ ಎಸ್.ಚಿನ್ನಾ ಎಂಟ್ರಿ ಕೊಟ್ಟಿದ್ದಾರೆ. ತೆಲುಗು ಖ್ಯಾತ ರೀ ರೆಕಾರ್ಡಿಂಗ್ ಸ್ಪೆಷಾಲಿಸ್ಟ್ ಆಗಿರುವ ಎಸ್ ಚಿನ್ನಾ, ಪ್ರಭಾಸ್ ನಟನೆಯ ರೆಬಲ್ ಸಿನಿಮಾ, ನಾಗಾರ್ಜುನ್ ನಟನೆಯ ಡಾನ್, ರವಿತೇಜಾ ಬೆಂಗಾಲ್ ಟೈಗರ್, ಬಾಲಯ್ಯ ನಟನೆಯ ಸಿಂಹ ಚಿತ್ರಗಳಿಗೆ ರೀ ರೆಕಾರ್ಡಿಂಗ್ ಮಾಡಿದ್ದಾರೆ. ನಿಖಿಲ್ ಕುಮಾರಸ್ವಾಮಿ ಚೊಚ್ಚಲ ಚಿತ್ರ ಜಾಗ್ವರ್ ಸಿನಿಮಾಗೂ ಇವರೇ ರೀ-ರೆಕಾರ್ಡಿಂಗ್ ಮಾಡಿದ್ದರು.






## ಸಿನಿದಿಗ್ಗಜರಿಂದ “ಹಿಕೋರಾ” ಹಾಡುಗಳು..



ರತ್ನ ಶ್ರೀಧರ್ ನಿರ್ಮಾಣದ, ನೀನಾಸಂ ಕಿಟ್ಟಿ ಕಥೆ, ಚಿತ್ರಕಥೆ ಹಾಗೂ ಸಂಭಾಷಣೆ ಬರೆದು ನಿರ್ದೇಶಿಸಿರುವ ಹಾಗೂ ಪೂರ್ಣಚಂದ್ರ ತೇಜಸ್ವಿ ಸಂಗೀತ ಸಂಯೋಜಿಸಿರುವ “ಹಿಕೋರಾ” ಚಿತ್ರದ ಹಾಡುಗಳ ಬಿಡುಗಡೆ ಸಮಾರಂಭ ಇತ್ತೀಚೆಗೆ ಅದ್ದೂರಿಯಾಗಿ ನೆರವೇರಿತು. ಕರ್ನಾಟಕ ಚಲನಚಿತ್ರ ಪ್ರದರ್ಶಕರ ಸಂಘದ ಅಧ್ಯಕ್ಷ ಕೆ.ವಿ.ಚಂದ್ರಶೇಖರ್, ಕನ್ನಡ ಚಲನಚಿತ್ರ ನಿರ್ಮಾಪಕರ ಸಂಘದ ಅಧ್ಯಕ್ಷ ಉಮೇಶ್ ಬಣಕಾರ್, ಕರ್ನಾಟಕ ಚಲನ ಚಿತ್ರ ನಿರ್ದೇಶಕರ ಸಂಘದ ಅಧ್ಯಕ್ಷ ಎನ್ನಾರ್ ಕೆ ವಿಶ್ವನಾಥ್, ಸಾಹಿತಿ ಡಾ॥ವಿ. ನಾಗೇಂದ್ರ ಪ್ರಸಾದ್, ನಿರ್ಮಾಪಕರಾದ ನರಸಿಂಹ, ನಾಗೇಶ್ ಕುಮಾರ್, ’ಟೆ.ಶಿ.ವೆಂಕಟೇಶ್, ಗೋಪಾಲ್ ಹಾಗೂ ನಟ ದೀಪಕ್ ಸೇರಿದಂತೆ ಅನೇಕ ಗಣ್ಯರು “ಹಿಕೋರಾ” ಹಾಡುಗಳನ್ನು ಲೋಕಾರ್ಪಣೆ ಮಾಡಿ, ಚಿತ್ರಕ್ಕೆ ’ಯಶಸ್ಸನ್ನು ಕೋರಿದರು.

## “ಪಿಲಿ ಪಂಜ” ಡಿಸೆಂಬರ್ 12ಕ್ಕೆ ತೆರೆಗೆ..



ಶಿಯಾನ ಪ್ರೊಡಕ್ಷನ್ ಲಾಂಛನದಲ್ಲಿ ತಯಾರಾದ ಯುವ ನಿರ್ಮಾಪಕ ಪ್ರತೀಕ್ ಯು ಪೂಜಾರಿ ಕಾವೂರು ನಿರ್ಮಾಣದ, ಭರತ್ ಶೆಟ್ಟಿಯವರ ಕಥೆ, ನಿರ್ದೇಶನದ “ಪಿಲಿ ಪಂಜ” ತುಳು ಸಿನಿಮಾ ನವೆಂಬರ್ 7ರ ಬದಲು ಡಿಸೆಂಬರ್ 12ಕ್ಕೆ ಬಿಡುಗಡೆಯಾಗಲಿದೆ. ರೂಪೇಶ್ ಶೆಟ್ಟಿ ನಿರ್ದೇಶನದ “ಜೈ” ಸಿನಿಮಾ ನವೆಂಬರ್ 14ಕ್ಕೆ ಬಿಡುಗಡೆಯಾಗುವುದರಿಂದ ತುಳು ಸಿನಿಮಾದಲ್ಲಿ ಪೈಪೋಟಿ ಸಲ್ಲದು ಎಂದು ಮನಗಂಡು ಪಿಲಿ ಪಂಜ ಸಿನಿಮಾ ಬಿಡುಗಡೆಯ ದಿನಾಂಕವನ್ನು ಡಿಸೆಂಬರ್ 12ಕ್ಕೆ ಮುಂದೂಡಿತು, ರೂಪೇಶ್ ಶೆಟ್ಟಿಯವರು ಬಿಡುಗಡೆ ದಿನಾಂಕವನ್ನು ಮಾಡುವುದರ ಮುಖೇನ ಇದೊಂದು ಉತ್ತಮ ಬೆಳವಣಿಗೆ, ಪಿಲಿ ಪಂಜ ತಂಡದ ಉತ್ತಮ ನಿರ್ಧಾರವನ್ನು ಸ್ವಾಗತಿಸುತ್ತೇನೆ ಎಂದು ಹೇಳುತ್ತಾ ಚಿತ್ರ ತಂಡಕ್ಕೆ ಶುಭ ಕೋರಿದರು..

## ಕರಾವಳಿಗರ “ಸ್ಕೂಲ್ ಲೀಡರ್” ಸೆಕ್ಸಸ್..

ಒಂದು ಸಾಧಾರಣ ಸರಕಾರಿ ಶಾಲೆಯಲ್ಲಿ ಇರುವಂಥ ಹಲವಾರು ಸಮಸ್ಯೆಗಳು, ಮುಖ್ಯವಾಗಿ ಶಿಕ್ಷಕರ ಕೊರತೆ ಮತ್ತು ಮಕ್ಕಳನ್ನು ಸರಿಯಾದ ದಾರಿಗೆ ತರಬಲ್ಲ ಗುರುವಿನ ಅವಶ್ಯಕತೆ ಚಿತ್ರದ ಜೀವಾಳ. ಯುವ ಶಿಕ್ಷಕರ ಹೊಸ ಅಲೋಚನೆಗಳು ಈಗಿನ ಸ್ಪರ್ಧಾತ್ಮಕ ಯುಗಕ್ಕೆ ಮಕ್ಕಳನ್ನು ತಯಾರುಗೊಳಿಸಲು ಹೇಗೆ ಸಹಕಾರಿ ಯಾದೀತು ಎಂಬುದನ್ನು ನಿರ್ದೇಶಕರು ಬಹಳ ಚೆನ್ನಾಗಿ ಕಟ್ಟಿ ಕೊಟ್ಟಿದ್ದಾರೆ. ಚಿತ್ರಕ್ಕೆ ಹಿನ್ನಲೆ ಸಂಗೀತ, ಸಾಹಿತ್ಯ ಮತ್ತು ಛಾಯಾಗ್ರಹಣ ಉತ್ತಮ ರೀತಿಯಲ್ಲಿ ಚಿತ್ರದಲ್ಲಿ ತೋರುತ್ತದೆ. ನಟಿಸಿದ ಹಿರಿಯ ನಟರು ಪ್ರಭುದ್ದರು ಮತ್ತು ತಮ್ಮ ಪಾತ್ರವನ್ನು ಅಚ್ಚುಕಟ್ಟಾಗಿ ನಿಭಾಯಿಸಿದ್ದಾರೆ. ಚಿತ್ರದಲ್ಲಿ ಮಕ್ಕಳದ್ದೆ ಕಾರುಬಾರು. ಬೋಳಾರ್ ಪಾತ್ರ ಎಲ್ಲಾ ಸಿನಿಮಾಗಿಂತ ಅಚ್ಚುಕಟ್ಟಾಗಿ ಅಲ್ಲಲ್ಲಿ ಹಾಸ್ಯದ ಸಿಂಚನ ನೀಡುತ್ತಿತ್ತು. ದೀಪಕ್ ರೈ ಪಾಣಾಜೆಯ ಗಂಬೀರವಾದ ಅಭಿನಯ ಖುಷಿ ಕೊಡುತ್ತದೆ. ಪ್ರತಿ ಮಕ್ಕಳು ಅನುಭವಿಸಿ ನಟಿಸಿದ್ದಾರೆ.



## ತೆರೆಯ ಮೇಲೆ ತಂದೆ-ಮಗನ “ಫಾದರ್ಸ್ ಡೇ”

ಕನ್ನಡದಲ್ಲಿ ಈಗ ಪ್ರಯೋಗಾತ್ಮಕ ಚಿತ್ರಗಳು ಹೆಚ್ಚು ಬರುತ್ತಿದೆ. ಜನರು ಅಂತಹ ಚಿತ್ರಗಳಿಗೆ ಉಘೇ ಎನ್ನುತ್ತಿದ್ದಾರೆ. ಅಂತಹ ಸಾಲಿಗೆ ಇಲೆವೆನ್ ಎಲಿಮೆಂಟ್ಸ್ ಸಂಸ್ಥೆ ರೆಕ್ಟ್ಯಾಂಗಲ್ ಸ್ಟುಡಿಯೋಸ್ ಸಹಯೋಗದೊಂದಿಗೆ ನಿರ್ಮಿಸಿರುವ “ ಫಾದರ್ಸ್ ಡೇ” ಚಿತ್ರ ಸೇರಲಿದೆ ಎಂಬ ಭರವಸೆ ಚಿತ್ರತಂಡಕ್ಕಿದೆ. ರಾಜಾರಾವ್ ರಾಜೇಂದ್ರನ್ ನಿರ್ದೇಶನದಲ್ಲಿ “ಆಚಾರ್ & ಕೋ”, “ಸಪ್ತಸಾಗರದಾಚೆ ಎಲ್ಲೋ”, “ ಅನಾಮಧೇಯ ಅಶೋಕ್ ಕುಮಾರ್” ಸೇರಿದಂತೆ ಅನೇಕ ಚಿತ್ರಗಳಲ್ಲಿ ನಟಿಸಿ ಜನಮನ್ನಣೆ ಪಡೆದುಕೊಂಡಿರುವ ಹರ್ಷಿಲ್ ಕೌಶಿಕ್ ಹಾಗೂ “ಶ್ರೀರಸ್ತು ಶುಭಮಸ್ತು” ಸೇರಿದಂತೆ ಅನೇಕ ಧಾರಾವಾಹಿಗಳಲ್ಲಿ ಅಭಿನಯಿಸಿ ಜನಪ್ರಿಯರಾಗಿರುವ ಅಜಿತ್ ಹಂಡೆ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. ಹೆಸರಾಂತ ಗಾಯಕ ಆಲ್ ಓಕೆ ಹಾಗೂ ಸಾಮ್ರಾಗ್ನಿ ರಾಜನ್ ಸಹ ಈ ಚಿತ್ರದಲ್ಲಿದ್ದಾರೆ.









Edited, Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ N R K Media World, No-10, ‘A’ 1st floor, 4th cross, 4th main, Gandhinagar Bengaluru-560009. email: karavalitharangini@gmail.com PH: +91 **9880109212**